☞ ಹಾವೇರಿ
☞ ಗದಗ
☞ ಧಾರವಾಡ
☞ ದಾವಣಗೆರೆ
☞ ಚಿತ್ರದುರ್ಗ
☞ ವಿಜಯನಗರ
☞ ಶಿವಮೊಗ್ಗ
☞ ಬಳ್ಳಾರಿ

ಸುದ್ದಿ, ಫೋಟೋ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ : 9480410207

ಪಾಂಡವ

PANDAVA Regional Kannada News Paper ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಪತ್ರಿಕೆ, ಜಾಹೀರಾತು ಇಸ್ತಿಯಾರನಾಮೆಗಳಿಗಾಗಿ ಸಂಪರ್ಕಿಸಿ : ಮೊಬೈಲ್ ನಂ. : 9742789207 7411679202

* Volume : XVII * Issue : 070 * FRIDAY 06, NOVEMBER 2026 * Editor : S.T. VEDAMURTHY * Page : 6 * Rs : 2.50 * RNI No. KARKAN/2011/39005 * PMG/KA/NK/HVR-028/2026-28 * pandavarnr@gmail.com * Mob No.: 9742789207

ಪ್ರಮುಖ ಸಂಕ್ಷಿಪ್ತ ಸುದ್ದಿ

ಜೂಜಾಟ: ಇಬ್ಬರ ಬಂಧನ

ಪಾಂಡವ ನ್ಯೂಸ್, ಗುತ್ತಲ : ಸಾರ್ವಜನಿಕ ರಸ್ತೆಯಲ್ಲಿ ಇಸ್ಪೀಟ್ ಎಲೆಗಳ ಸಹಾಯದಿಂದ ಹಣವನ್ನು ಪಣಕ್ಕಿಟ್ಟು ಜೂಜಾಟ ಆಡುತ್ತಿದ್ದವರ ವಿರುದ್ಧ ಗುತ್ತಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನ. 4ರಂದು ಸಂಜೆ 5.30ರಿಂದ ರಾತ್ರಿ 7.30ರ ನಡುವಿನ ಅವಧಿಯಲ್ಲಿ ಗುತ್ತಲ ಪೊಲೀಸ್ ಠಾಣೆ ವ್ಯಾಪ್ತಿಯ ಬಸಾಪುರ ಸಮೀಪದ ನೆಗಳೂರು ಕ್ರಾಸ್ ಬಳಿಯ ಸಾರ್ವಜನಿಕ ರಸ್ತೆಯಲ್ಲಿ 7ರಿಂದ 8 ಜನರು ಹಣವನ್ನು ಪಣಕ್ಕಿಟ್ಟು ಅಂದರ್–ಬಾಹರ್ ಜೂಜಾಟ ಆಡುತ್ತಿರುವ ಬಗ್ಗೆ ಪೊಲೀಸರಿಗೆ ಮಾಹಿತಿ ಲಭಿಸಿತ್ತು.

ಈ ಹಿನ್ನೆಲೆಯಲ್ಲಿ ದಾಳಿ ನಡೆಸಲು ಮುಂದಾದ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪಿಎಸ್ಐ ಪರಶುರಾಮ ಎನ್. ಲಮಾಣಿ ನೇತೃತ್ವದಲ್ಲಿ ದಾಳಿ ನಡೆದಿದೆ. ಪ್ರಕರಣದಲ್ಲಿ ಬಸಾಪುರದ ಶೇಖರ ನಿಂಗಪ್ಪ ಬಮ್ಮನಕಟ್ಟಿ(38) ಹಾಗೂ ಭರಮಪ್ಪ ಹೇಮಪ್ಪ ದೊಡ್ಡಮನಿ(50) ಎಂಬುವವರನ್ನು ವಶಕ್ಕೆ ಪಡೆದಿರುವ ಪೊಲೀಸರು ಗುತ್ತಲ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಸಿದ್ದಾರೆ

ಬೈಕ್‌ಗೆ ಕಾರು ಡಿಕ್ಕಿ: ಇಬ್ಬರಿಗೆ ಗಾಯ

ಪಾಂಡವ ನ್ಯೂಸ್, ರಾಣೆಬೆನ್ನೂರು : ಮದ್ಯಪಾನ ಮಾಡಿ ಅತಿವೇಗ ಹಾಗೂ ನಿರ್ಲಕ್ಷ್ಯದಿಂದ ಬೈಕ್ ಚಲಾಯಿಸಿದ ಪರಿಣಾಮ ಕಾರಿಗೆ ಡಿಕ್ಕಿ ಹೊಡೆದು ಬೈಕ್ ಸವಾರ ಹಾಗೂ ಹಿಂಬದಿ ಸವಾರ ಗಾಯಗೊಂಡ ಘಟನೆ ನಗರದ ಮಾಫೋಡ ಕ್ರಾಸ್ ಬಳಿ ಹರಿಹರ–ರಾಣೆಬೆನ್ನೂರು ರಸ್ತೆಯಲ್ಲಿ ನ.4ರಂದು ಬೆಳಗ್ಗೆ ನಡೆದಿದೆ.

ಚಿಕ್ಕಮಗಳೂರು ಜಿಲ್ಲೆಯ ನವಗ್ರಾಮದ ನಿವಾಸಿ ಸುದರ್ಶನ್ ಕೆ.ಎನ್. (22) ಎಂಬಾತ ಮದ್ಯಪಾನ ಮಾಡಿ ಬಜಾಜ್ ಪಲ್ಸರ್ ಬೈಕ್ (ಕೆಎ–18/ಇಡಿ–8184) ಅನ್ನು ಹರಿಹರ ಕಡೆಯಿಂದ ರಾಣೆಬೆನ್ನೂರು ಕಡೆಗೆ ಅತಿವೇಗ ಮತ್ತು ನಿರ್ಲಕ್ಷ್ಯದಿಂದ ಚಲಾಯಿಸಿಕೊಂಡು ಬಂದಿದ್ದಾನೆ. ಈ ವೇಳೆ ವಿನಾಯಕ ನಗರದ ನಿವಾಸಿ ಲೋಕೇಶ್ ಎಂಬುವರು ರಾಣೆಬೆನ್ನೂರಿನಿಂದ ಮಾಫೋಡ ಕಡೆಗೆ ಮಹೀಂದ್ರಾ ಸ್ಕಾರ್ಪಿಯೋ ಕಾರು (ಕೆಎ–68/ಎಫ್–0081) ಚಲಾಯಿಸುತ್ತಿದ್ದರು.

ಮಾಫೋಡ ಕ್ರಾಸ್ ಬಳಿ ಕಾರಿನ ಚಾಲಕ ಬಲಭಾಗದ ಇಂಡಿಕೇಟರ್ ಹಾಕಿಕೊಂಡು ನಿಧಾನವಾಗಿ ರಸ್ತೆ ದಾಟುತ್ತಿದ್ದಾಗ, ನಿಯಂತ್ರಣ ತಪ್ಪಿದ ಬೈಕ್ ಕಾರಿಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಬೈಕ್ ಸವಾರ ಸುದರ್ಶನ್‌ನ ಬಲಗಾಲಿಗೆ ತೀವ್ರ ರಕ್ತಗಾಯವಾಗಿದ್ದು, ಮೈಕೈಗಳಿಗೆ ತರಚಿದ ಗಾಯಗಳಾಗಿವೆ. ಹಿಂಬದಿ ಸವಾರ ಲೋಕೇಶ್ ಅವರಿಗೂ ಗಾಯಗಳಾಗಿವೆ.

ಈ ಕುರಿತು ರಾಣೆಬೆನ್ನೂರು ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ: ರಾಣೇಬೆನ್ನೂರಿನಲ್ಲಿ ಯುವ ಸಂಸತ್ ಕಾರ್ಯಕ್ರಮ

ಪಾಂಡವ ನ್ಯೂಸ್, ಹಾವೇರಿ : ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ರಾಣೇಬೆನ್ನೂರು ತಾಲೂಕು ಮಟ್ಟದ ಯುವ ಸಂಸತ್ ಕಾರ್ಯಕ್ರಮವನ್ನು ನವೆಂಬರ್ 6 ರಂದು ಹಮ್ಮಿಕೊಳ್ಳಲಾಗಿದೆ.ನವೆಂಬರ್ 6ರಂದು ಬೆಳಿಗ್ಗೆ 10 ಗಂಟೆಗೆ ರಾಣೇಬೆನ್ನೂರು ನಗರಸಭೆಯ ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಕಾರ್ಯಕ್ರಮದ ಉದ್ಘಾಟನೆ ನಡೆಯಲಿದೆ. ಯುವಜನರಲ್ಲಿ ಪ್ರಜಾಪ್ರಭುತ್ವದ ಮೌಲ್ಯಗಳು, ಸಂಸದೀಯ ವ್ಯವಸ್ಥೆ, ಪ್ರಜಾಸತ್ತಾತ್ಮಕ ಆಡಳಿತ ಹಾಗೂ ಸಂವಿಧಾನಾತ್ಮಕ ಆಶಯಗಳ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ.ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಜಿ.ಎಸ್. ಪಾಟೀಲ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು ಯುವ ಸಂಸತ್ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ. ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಆಯೋಜಕರು ಮನವಿ ತಿಳಿಸಿದ್ದಾರೆ.

ಮೂರು ವರ್ಷಗಳಿಂದ ಸರ್ಕಾರದ ಕಡತದಲ್ಲೇ ಕೊಳೆಯುತ್ತಿದೆ ಅಭಿವೃದ್ಧಿ ಪ್ರಸ್ತಾವನೆ

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ 'ವಿ ಕೇರ್' ರಾಣೆಬೆನ್ನೂರ ಯುವಕರ ಶ್ರಮದಾನವೇ ಉತ್ತರ

ಪಾಪು ಸಮಾಧಿಗೂ ಸಿಗಲಿಲ್ಲ ಸ್ಮಾರಕ ಭಾಗ್ಯ!

ಪಾಂಡವ ವಿಶೇಷ ವರದಿ

ರಾಣೆಬೆನ್ನೂರು : ಕನ್ನಡದ ನೆಲ, ನುಡಿ, ಜಲಕ್ಕಾಗಿ ಸರ್ಕಾರಗಳನ್ನೇ ಎಚ್ಚರಿಸುತ್ತಿದ್ದ ಕನ್ನಡ ಪತ್ರಿಕೋದ್ಯಮದ ಭೀಷ್ಮ ನಾಡೋಜ ಪಾಟೀಲ ಪುಟ್ಟಪ್ಪ (ಪಾಪು) ಅವರ ಸಮಾಧಿಗೇ ಇಂದು ಸರ್ಕಾರದಿಂದ ಗೌರವ ಸಿಕ್ಕಿಲ್ಲ! 2020ರ ಮಾರ್ಚ್ 16ರಂದು ನಿಧನರಾದ ಅವರ ಸಮಾಧಿ ಹಲಗೇರಿಯಲ್ಲಿ ಸ್ಮಾರಕ ಭಾಗ್ಯವಿಲ್ಲದೆ ನಿರ್ಲಕ್ಷ್ಯಕ್ಕೆ ಒಳಗಾಗಿದೆ. ಅಭಿವೃದ್ಧಿಗೆ ಮೂರು ವರ್ಷಗಳ ಹಿಂದೆಯೇ ಸಲ್ಲಿಕೆಯಾದ ಪ್ರಸ್ತಾವನೆ ಸರ್ಕಾರದ ಕಡತದಲ್ಲೇ ಕೊಳೆಯುತ್ತಿದ್ದರೆ,

ಸಮಾಧಿ ಆವರಣ ಗಿಡಗಂಟಿಗಳಿಂದ ಮುಚ್ಚಿಹೋಗಿದೆ. ಆಡಳಿತದ ನಿರ್ಲಕ್ಷ್ಯಕ್ಕೆ ಬೇಸತ್ತ ರಾಣೆಬೆನ್ನೂರಿನ 'ವಿ ಕೇರ್' ಸ್ವಯಂಸೇವಾ ತಂಡದ ಯುವಕರೇ ಪೊರಕೆ ಹಿಡಿದು ಶ್ರಮದಾನಕ್ಕಿಳಿದಿದ್ದಾರೆ.

ಕನ್ನಡದ ಕಾವಲುಗಾರನ ಅಂತಿಮ ನೆಲೆಯನ್ನೂ ನಿರ್ವಹಣೆ ಮಾಡಲಾಗದ ಆಡಳಿತ ವ್ಯವಸ್ಥೆಯ ವಿರುದ್ಧ ಕನ್ನಡಾಭಿಮಾನಿಗಳ ಆಕ್ರೋಶ ವ್ಯಕ್ತವಾಗಿದೆ. **ಮೂರು ವರ್ಷಗಳಿಂದ ಕಡತಕ್ಕೆ ಕದಲದ ಚಕ್ರ!** : ಪಾಪು ಅವರ ಸಮಾಧಿ ಸ್ಥಳವನ್ನು ಮಾದರಿ ಸ್ಮಾರಕವಾಗಿ ಅಭಿವೃದ್ಧಿಪಡಿಸುವಂತೆ ಕನ್ನಡ







ಅಭಿವೃದ್ಧಿ ಪ್ರಾಧಿಕಾರ ಮೂರು ವರ್ಷಗಳ ಹಿಂದೆಯೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಆದರೆ, ಇಂದಿಗೂ ಯೋಜನೆ ಅನುಷ್ಠಾನದ ಹಂತ ತಲುಪಿಲ್ಲ. ಪ್ರಸ್ತಾವನೆಗೆ ಅನುಮೋದನೆ ದೊರೆತಿದೆಯೇ? ಅನುದಾನ ಮಂಜೂರಾಗಿದೆಯೇ? ಕಡತ ಯಾವ ಇಲಾಖೆಯಲ್ಲಿದೆ? ಎಂಬ ಪ್ರಶ್ನೆಗಳಿಗೆ ಸ್ಪಷ್ಟ ಉತ್ತರ ಸಿಗುತ್ತಿಲ್ಲ.

ಕನ್ನಡದ ಅಸ್ಮಿತೆಗಾಗಿ ಜೀವನವನ್ನೇ ಸಮರ್ಪಿಸಿದ ಹಿರಿಯ ಚೇತನದ ಸ್ಮಾರಕ ಅಭಿವೃದ್ಧಿಗೆ ಸರ್ಕಾರದ ಮಟ್ಟದಲ್ಲಿ ಇಷ್ಟೊಂದು ವಿಳಂಬವೇಕೆ? ಪ್ರಸ್ತಾವನೆ ಸಲ್ಲಿಕೆಯಾದ ಬಳಿಕ ಅದರ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕಾದ ಜಿಲ್ಲಾಡಳಿತದ ಜವಾಬ್ದಾರಿ ಏನು? ಎಂಬ ಪ್ರಶ್ನೆಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

'ವಿ ಕೇರ್' ಯುವಕರಿಂದ ಶ್ರಮದಾನ : ಸಮಾಧಿ ಆವರಣದ ದುಸ್ಥಿತಿ ಕಂಡು ಬೇಸರಗೊಂಡ ರಾಣೆಬೆನ್ನೂರಿನ *'ವಿ ಕೇರ್' ಸ್ವಯಂಸೇವಾ ತಂಡದ* ಯುವಕರು ಅಧಿಕಾರಿಗಳಿಗಾಗಿ ಕಾಯದೆ ಸ್ವಯಂಪ್ರೇರಿತರಾಗಿ ಸ್ವಚ್ಛತಾ ಕಾರ್ಯಕ್ಕೆ ಮುಂದಾಗಿದ್ದಾರೆ.

ತಂಡದ ಬೀರೇಶ್ ಬ್ಯಾಡಗಿ, ಪ್ರವೀಣ್ ಚವ್ಹಾನ್, ಸಿದ್ದು ಗುಂಡೇರ, ರಾಜು ಬುದನೂರ, ಚೇತನ್ ಮಿರಜಕರ, ಸುನಿಲ್ ಕಟಗಿ, ಸಂಜಯ್, ವಿನಾಯಕ ಬೇತೂರ ಹಾಗೂ ಮಾಲತೇಶ ಶ್ರಮದಾನದಲ್ಲಿ ಪಾಲ್ಗೊಂಡು ಸಮಾಧಿ ಆವರಣದಲ್ಲಿದ್ದ ಗಿಡಗಂಟಿ, ಕಳೆಗಳನ್ನು ತೆರವುಗೊಳಿಸಿದ್ದಾರೆ.

ಸರ್ಕಾರ ಮತ್ತು ಜಿಲ್ಲಾಡಳಿತ ನಿರ್ವಹಿಸಬೇಕಿದ್ದ ಕೆಲಸವನ್ನು 'ವಿ ಕೇರ್' ತಂಡದ ಯುವಕರು ಸಾಮಾಜಿಕ ಕಳಕಳಿಯಿಂದ ಕೈಗೆತ್ತಿಕೊಂಡಿರುವುದು ಮೆಚ್ಚುಗೆಗೆ ಪಾತ್ರವಾಗಿದೆ. ಆದರೆ, ಕನ್ನಡದ ಹಿರಿಯ ಚೇತನದ ಸಮಾಧಿ ಆವರಣ ಸ್ವಚ್ಛವಾಗಿಡಲು ಕೂಡ ಯುವಕರು ಮುಂದೆ ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿರುವುದು ಆಡಳಿತದ ನಿರ್ಲಕ್ಷ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

2ನೇ ಪುಟಕ್ಕೆ ▶▶▶

ನ.11 ರಂದು ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ

ಪಾಂಡವ ನ್ಯೂಸ್, ಹಾವೇರಿ: : ಜಿಲ್ಲಾಡಳಿತದ ವತಿಯಿಂದ ನವೆಂಬರ್ 11 ರಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಾಂಕೇತಿಕವಾಗಿ ವೀರವನಿತೆ ಒನಕೆ ಓಬವ್ವ ಜಯಂತಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ. ಎಲ್. ನಾಗರಾಜ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು, ಜಿಲ್ಲಾ ಕೇಂದ್ರದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಬೇಕೆಂಬ ಸಮುದಾಯದ ಮುಖಂಡರ ಆಶಯದಂತೆ ಜಯಂತಿ ಆಚರಣೆಗೆ ಅವಕಾಶ ಕಲ್ಪಿಸಲಾಗಿದೆ. ಜಯಂತಿ ಆಚರಣೆಯ ದಿನಾಂಕ, ಸ್ಥಳ ಹಾಗೂ ಉಪನ್ಯಾಸಕರ ಕುರಿತ ಮಾಹಿತಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ



ನೀಡುವಂತೆ ಸಮುದಾಯದ ಮುಖಂಡರಿಗೆ ಸೂಚಿಸಿದರು.

ಸರ್ಕಾರದ ಮಾರ್ಗಸೂಚಿಯಂತೆ ನವೆಂಬರ್ 11 ರಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಾಂಕೇತಿಕವಾಗಿ ಜಯಂತಿ ಆಚರಿಸಲಾಗುವುದು. ಅಂದು ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿಯೂ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಬೇಕು. ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳ ಶಾಲಾ–ಕಾಲೇಜುಗಳು ಮತ್ತು ಸರ್ಕಾರಿ ಕಚೇರಿಗಳಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸುವಂತೆ ಕರೆ ನೀಡಿದರು.

ವೀರವನಿತೆ ಒನಕೆ ಓಬವ್ವ ಅವರ ಸಾಹಸ, ಧೈರ್ಯ ಹಾಗೂ ಶೌರ್ಯವನ್ನು ಸ್ಮರಿಸುವ ನಿಟ್ಟಿನಲ್ಲಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ. ಹಿರೇಮಠ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮುದಾಯದ ಮುಖಂಡರು ಉಪಸ್ಥಿತರಿದ್ದರು.

ಸಿಎಂ ಮುಂದೆಯೇ ಪುತ್ರಿಯಿಂದ ಸರ್ಕಾರಕ್ಕೆ ಚಾಟಿ!



ಪಾಂಡವ ನ್ಯೂಸ್, ಬೆಂಗಳೂರು : ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳಿವೆ. ಆದರೆ ಅವುಗಳ ನಿರ್ವಹಣೆಯಿಲ್ಲ. ಶೌಚಾಲಯಗಳಿವೆ, ಸ್ವಚ್ಛಗೊಳಿಸುವವರಿಲ್ಲ. ಕಂಪ್ಯೂಟರ್‌ಗಳಿವೆ, ಕಲಿಸುವವರಿಲ್ಲ. ಲಕ್ಷಾಂತರ ರೂಪಾಯಿ ವೇತನ ಪಡೆಯುವ ಶಿಕ್ಷಕರಲ್ಲಿಯೂ ಕರ್ತವ್ಯನಿಷ್ಠೆಯ ಕೊರತೆಯಿದೆ... ಹೀಗೆ ಸರ್ಕಾರಿ ಶಾಲೆಗಳ ವಾಸ್ತವ ಸ್ಥಿತಿಯನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲೇ ಪ್ರಸ್ತಾಪಿಸುವ ಮೂಲಕ ಐಶ್ವರ್ಯಾ ಡಿಕೆಎಸ್ ಹೆಗ್ಡೆ ಸರ್ಕಾರದ ವ್ಯವಸ್ಥೆಗೆ ಚಾಟಿ ಬೀಸಿದರು.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಬುಧವಾರ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಸಾಂಸ್ಥಿಕ ಸಾಮಾಜಿಕ ಹೊಣೆಗಾರಿಕೆ (ಸಿಎಸ್ಆರ್) ಪ್ರತಿನಿಧಿಗಳ ಸಭೆಯಲ್ಲಿ ನ್ಯಾಷನಲ್ ಎಜುಕೇಷನ್ ಫೌಂಡೇಷನ್‌ನ ಟ್ರಸ್ಟಿ ಕಾರ್ಯದರ್ಶಿಯೂ ಆಗಿರುವ ಐಶ್ವರ್ಯಾ ಮಾತನಾಡಿದರು.ದೊಡ್ಡಲಹಳ್ಳಿ ಸರ್ಕಾರಿ ಶಾಲೆಯನ್ನು ದತ್ತು ಪಡೆದಾಗ 400 ಮಕ್ಕಳು ದಾಖಲಾಗಿದ್ದರು. ಶಾಲೆಯಲ್ಲಿ ಅಗತ್ಯ ಮೂಲಸೌಕರ್ಯಗಳಿದ್ದರೂ ಅವುಗಳಿಂದಲೇ ಶಿಕ್ಷಣದ ಗುಣಮಟ್ಟ ಹೆಚ್ಚುತ್ತದೆ ಎನ್ನಲಾಗದು. ಶಾಲೆಗಳ ಅಭಿವೃದ್ಧಿಗೆ ಸೌಲಭ್ಯಗಳ ಜತೆಗೆ ಅವುಗಳ ನಿರ್ವಹಣೆಯ ಜವಾಬ್ದಾರಿಯೂ ಮುಖ್ಯ ಎಂದರು.

ಶೌಚಾಲಯವಿದ್ದರೂ ಸ್ವಚ್ಛತೆಯಿಲ್ಲ! : ಸರ್ಕಾರಿ ಶಾಲೆಗಳಲ್ಲಿ ನೈರ್ಮಲ್ಯ ದೊಡ್ಡ ಸಮಸ್ಯೆಯಾಗಿದೆ. ಶೌಚಾಲಯಗಳಿದ್ದರೂ ಸ್ವಚ್ಛವಾಗಿರುವುದಿಲ್ಲ. ಸ್ವಚ್ಛತೆ ಕಾಪಾಡಲು ಸಿಬ್ಬಂದಿಯಿಲ್ಲ. ಹೆಣ್ಣುಮಕ್ಕಳ ಸ್ಯಾನಿಟರಿ ಪ್ಯಾಡ್ ವಿಲೇವಾರಿಗೆ ಸೂಕ್ತ ವ್ಯವಸ್ಥೆಯಿಲ್ಲ. ಶುದ್ಧ ಕುಡಿಯುವ ನೀರಿನ ಕೊರತೆಯೂ ಇದೆ. ಇವೆಲ್ಲ ಸರ್ಕಾರ ನಿರ್ವಹಿಸಬೇಕಾದ ಕನಿಷ್ಠ ಜವಾಬ್ದಾರಿಗಳು ಎಂದು ಹೇಳಿದರು.

ಕಂಪ್ಯೂಟರ್‌ಗಳಿಗೂ ಹಿಡಿದಿದೆ ತುಕ್ಕು! : ಶಾಲೆಯಲ್ಲಿ ಸಂಘ–ಸಂಸ್ಥೆಗಳು ನೀಡಿದ್ದ ಕಂಪ್ಯೂಟರ್ ಲ್ಯಾಬ್, ರೊಬೊಟಿಕ್ಸ್ ಮತ್ತು ಐಒಟಿ ಪ್ರಯೋಗಾಲಯಗಳಿದ್ದವು. ಆದರೆ ಅವುಗಳನ್ನು ಮಕ್ಕಳಿಗೆ ಕಲಿಸುವವರಿರಲಿಲ್ಲ. ಕಂಪ್ಯೂಟರ್‌ಗಳು ಬಳಕೆಯಾಗದೆ ತುಕ್ಕು ಹಿಡಿಯುವ ಸ್ಥಿತಿಗೆ ತಲುಪಿದ್ದವು. ಸರ್ಕಾರ ಎಷ್ಟು ಕಂಪ್ಯೂಟರ್‌ಗಳನ್ನು ನೀಡಿದೆ ಎಂಬುದಕ್ಕಿಂತ ಅವು ಎಷ್ಟು ಸಮರ್ಪಕವಾಗಿ ಬಳಕೆಯಾಗುತ್ತಿವೆ ಎಂಬುದರ ಆಡಿಟ್ ನಡೆಯಬೇಕು ಎಂದು ಒತ್ತಾಯಿಸಿದರು.

2ನೇ ಪುಟಕ್ಕೆ ▶▶▶

ಬೇಡ್ತಿ–ವರದಾ ಯೋಜನೆಗೆ ಪಕ್ಷಾತೀತ ಹೋರಾಟ ಅನಿವಾರ್ಯ

28 ಟಿಎಂಸಿ ನೀರಿಗಾಗಿ ಸಂಘಟಿತ ಜನಾಂದೋಲನಕ್ಕೆ ಕರೆ

ಪಾಂಡವ ನ್ಯೂಸ್, ಹಾವೇರಿ : ಉತ್ತರ ಕರ್ನಾಟಕದ ರೈತರ ಭವಿಷ್ಯ ಬದಲಿಸುವ ಸಾಮರ್ಥ್ಯ ಹೊಂದಿರುವ ಬೇಡ್ತಿ–ವರದಾ ನದಿ ಜೋಡಣೆ ಯೋಜನೆ ಅನುಷ್ಠಾನಕ್ಕೆ ಪಕ್ಷಾತೀತ ಹಾಗೂ ಸುದೀರ್ಘ ಹೋರಾಟ ಅಗತ್ಯ. ಈ ನಿಟ್ಟಿನಲ್ಲಿ ಹಾವೇರಿ ಜಿಲ್ಲೆಯ ಜನರ ಒಗ್ಗಟ್ಟು ಮತ್ತು ಹೋರಾಟದ ಶಕ್ತಿ ಇಡೀ ದೇಶಕ್ಕೆ ತಿಳಿಯಬೇಕು ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಕರೆ ನೀಡಿದರು.

ನಗರದ ಹುಕ್ಕೇರಿಮಠದ ಶಿವಾನುಭವ ಮಂಟಪದಲ್ಲಿ ನಡೆದ ಬೇಡ್ತಿ–ವರದಾ ನದಿ ಜೋಡಣೆ ನೀರಾವರಿ ಯೋಜನೆಯ ವಿಶೇಷ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಬೃಹತ್ ಯೋಜನೆ ಅನುಷ್ಠಾನಗೊಳ್ಳಲು ಹಲವು ಹಂತಗಳ ಅನುಮೋದನೆ ಅಗತ್ಯ. ನಿರಂತರ ಹೋರಾಟದಿಂದ ಅಸಾಧ್ಯವಾದುದನ್ನೂ ಸಾಧ್ಯವಾಗಿಸಬಹುದು. ಹೀಗಾಗಿ ಆತ್ಮವಿಶ್ವಾಸ ಕಳೆದುಕೊಳ್ಳದೆ ಹೋರಾಟ ಮುಂದುವರಿಸಬೇಕು ಎಂದರು.ಹಿಂದಿನ ಯೋಜನೆಯ ರೂಪುರೇಷೆಗೂ ಈಗಿನ ಪ್ರಸ್ತಾವನೆಗೂ ವ್ಯತ್ಯಾಸವಿದೆ. ಪ್ರಸ್ತುತ ಯೋಜನೆಯಿಂದ ದೊಡ್ಡ ಪ್ರಮಾಣದ ಹಿನ್ನೀರು ಮುಳುಗಡೆಯಾಗುವುದಿಲ್ಲ. ಸುಮಾರು 700 ಹೆಕ್ಟೇರ್ ನದಿ ಪಾತ್ರದ ಪ್ರದೇಶ ಮಾತ್ರ ಯೋಜನೆಗೆ ಒಳಪಡಲಿದೆ. ಡಿಪಿಆರ್ ಪೂರ್ಣಗೊಂಡ ಬಳಿಕ ಯೋಜನೆಯ ಸ್ಪಷ್ಟ ಚಿತ್ರಣ ದೊರೆಯಲಿದೆ.

ಸರ್ವೆ ಕಾರ್ಯಕ್ಕೆ ಅಡ್ಡಿಯಾಗುತ್ತಿರುವ ಹಿನ್ನೆಲೆಯಲ್ಲಿ ಡ್ರೋನ್ ಮೂಲಕ ಸಮೀಕ್ಷೆ ನಡೆಸಲು ಸೂಚಿಸಲಾಗಿದೆ. ಹಾವೇರಿ ಜಿಲ್ಲೆಗೆ ಪ್ರತ್ಯೇಕ ನೀರಿನ ಪಾಲು ದೊರಕಿಸುವ ನಿಟ್ಟಿನಲ್ಲಿ ಪ್ರಯತ್ನ ಮುಂದುವರಿದಿದೆ ಎಂದು ತಿಳಿಸಿದರು.

ಶಿರಸಿಗೆ 100 ಮಠಾಧೀಶರ ನಿಯೋಗ : ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನದ ದಿಂಗಾಲೇಶ್ವರ ಸ್ವಾಮೀಜಿ ಮಾತನಾಡಿ, ಬೇಡ್ತಿ–ವರದಾ

ಮೊದಲ ಪುಟದಿಂದ.....

ಪಾಪು ಸಮಾಧಿಗೂ .....

ಸ್ಮಾರಕ ಅಭಿವೃದ್ಧಿಗೆ ಸರ್ಕಾರ ಮುಂದಾಗಲಿ: ಪ್ರವೀಣ್ ಚವ್ಹಾಣ : ಪಾಟೀಲ ಪುಟ್ಟಪ್ಪ ಅವರು ಕನ್ನಡ ನಾಡು, ನುಡಿ ಹಾಗೂ ಪತ್ರಿಕೋದ್ಯಮಕ್ಕೆ ಸಲ್ಲಿಸಿರುವ ಸೇವೆ ಅಪಾರ. ಇಂತಹ ಮಹಾನ್ ಚೇತನದ ಸಮಾಧಿ ನಿರ್ಲಕ್ಷ್ಯಕ್ಕೆ ಒಳಗಾಗಿರುವುದು ನೋವಿನ ಸಂಗತಿ. ಸಮಾಧಿ ಆವರಣದ ದುಸ್ಥಿತಿ ಕಂಡು 'ಏ ಕೇರ್' ತಂಡದ ಯುವಕರು ಸ್ವಚ್ಛತಾ ಕಾರ್ಯ ಕೈಗೊಂಡಿದ್ದೇವೆ. ಇದು ಕೇವಲ ಸ್ವಚ್ಛತಾ ಕಾರ್ಯವಲ್ಲ; ಕನ್ನಡದ ಹಿರಿಯ ಚೇತನದ ಮೇಲಿನ ಗೌರವದ ಸಂಕೇತ. ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಸಮಾಧಿ ಸ್ಥಳವನ್ನು ಮಾದರಿ ಸ್ಮಾರಕವನ್ನಾಗಿ ಅಭಿವೃದ್ಧಿಪಡಿಸಬೇಕು. ಪ್ರಸ್ತಾವನೆಯನ್ನು ಕಡತದಲ್ಲೇ ಉಳಿಸದೆ ಅನುಷ್ಠಾನಕ್ಕೆ ತರಬೇಕು ಎಂದು ಪ್ರವೀಣ್ ಚವ್ಹಾಣ ಒತ್ತಾಯಿಸಿದರು.

ಸ್ಮಾರಕವಷ್ಟೇ ಅಲ್ಲ, ಜ್ಞಾನಕೇಂದ್ರವೂ ಆಗಲಿ : ಪಾಪು ಅವರ ಸಮಾಧಿ ಸ್ಥಳವನ್ನು ಕೇವಲ ಸಮಾಧಿ ಆವರಣವಾಗಿ ಉಳಿಸದೆ, ಕನ್ನಡದ ಹೋರಾಟದ ಇತಿಹಾಸ ಸಾರುವ ಸ್ಮಾರಕ ಹಾಗೂ ಜ್ಞಾನಕೇಂದ್ರವನ್ನಾಗಿ ರೂಪಿಸಬೇಕು. ಸಮಾಧಿ ಸುತ್ತ ಉದ್ಯಾನ, ಕಾಂಪೌಂಡ್, ವಿದ್ಯುತ್, ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಪಾಪು ಅವರ ಜೀವನ ಸಾಧನೆ, ಪತ್ರಿಕೋದ್ಯಮದ ಸೇವೆ, ಕರ್ನಾಟಕ ಏಕೀಕರಣ ಹೋರಾಟದ ಅಪರೂಪದ ಛಾಯಾಚಿತ್ರ ಹಾಗೂ ದಾಖಲೆಗಳನ್ನು ಪ್ರದರ್ಶಿಸುವ ಮಾಹಿತಿ ಕೇಂದ್ರ ಸ್ಥಾಪಿಸಬೇಕು. ವಿದ್ಯಾರ್ಥಿಗಳು, ಯುವ ಪತ್ರಕರ್ತರು ಮತ್ತು ಸಂಶೋಧಕರಿಗಾಗಿ ಗ್ರಂಥಾಲಯ ಹಾಗೂ ದಾಖಲೆ ಸಂಗ್ರಹಾಲಯ ನಿರ್ಮಿಸಬೇಕು ಎಂಬುದು ಕನ್ನಡಾಭಿಮಾನಿಗಳ ಒತ್ತಾಯ.

ಕನ್ನಡದ ಕಾವಲುಗಾರನ ಸಮಾಧಿಗೂ ಕಾವಲು ಇಲ್ಲವೇ? : ಕನ್ನಡದ ಹೆಸರಿನಲ್ಲಿ ಭಾಷಣ, ಜಯಂತಿ, ಸನ್ಮಾನ ಕಾರ್ಯಕ್ರಮಗಳನ್ನು ನಡೆಸುವ ವ್ಯವಸ್ಥೆಗೆ ಕನ್ನಡದ ಹಿರಿಯ ಹೋರಾಟಗಾರನ ಸ್ಮಾರಕ ನಿರ್ಮಿಸಲು ಮಾತ್ರ ಏಕೆ ಹಿಂಜರಿಕೆ? ಜಿಲ್ಲಾಧಿಕಾರಿಗಳು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಭಿವೃದ್ಧಿ ಪ್ರಸ್ತಾವನೆಯ ಇಂದಿನ ಸ್ಥಿತಿಯನ್ನು ಬಹಿರಂಗಪಡಿಸಿ, ಅನುದಾನ ಮಂಜೂರಾತಿ ಹಾಗೂ ಸ್ಮಾರಕ ನಿರ್ಮಾಣಕ್ಕೆ ಕಾಲಮಿತಿ ನಿಗದಿಪಡಿಸಬೇಕು.

ಕನ್ನಡಕ್ಕಾಗಿ ಬದುಕಿದ ಮಹಾನ್ ಚೇತನದ ಸ್ಮಾರಕವನ್ನೂ ನಿರ್ಲಕ್ಷಿಸುವುದು ನಾಡಿನ ಆತ್ಮಗೌರವಕ್ಕೆ ಮಾಡುವ ಅವಮಾನ. ಸರ್ಕಾರ ಇನ್ನಾದರೂ ಎಚ್ಚೆತ್ತುಕೊಳ್ಳದಿದ್ದರೆ ಪಾಪು ಅವರ ಸ್ಮಾರಕ ಅಭಿವೃದ್ಧಿಗಾಗಿ ಕನ್ನಡಾಭಿಮಾನಿಗಳು ಹೋರಾಟದ ಹಾದಿ ಹಿಡಿಯುವುದು ಅನಿವಾರ್ಯವಾಗಲಿದೆ.

ಮೊದಲ ಪುಟದಿಂದ.....

28 ಟಿಎಂಸಿ ನೀರಿಗಾಗಿ ಸಂಘಟಿತ ...

ಅಘನಾಶಿನಿ ಯೋಜನೆಗೂ ನಮ್ಮ ಹೋರಾಟಕ್ಕೂ ಯಾವುದೇ ಸಂಬಂಧವಿಲ್ಲ. ನಮ್ಮ ಸ್ಪಷ್ಟ ಬೇಡಿಕೆ ಬೇಡ್ತಿ–ವರದಾ ನದಿ ಜೋಡಣೆ ಯೋಜನೆಯಾಗಿದೆ. ಈ ಕುರಿತು ಜನರಲ್ಲಿ ಇರುವ ಗೊಂದಲ ನಿವಾರಿಸಲು ಪಂಚಾಯಿತಿ ಹಾಗೂ ಗ್ರಾಮಮಟ್ಟದಲ್ಲಿ ಜಾಗೃತಿ ಮೂಡಿಸಬೇಕು. ಯೋಜನೆಯ ಉದ್ದೇಶ ಮತ್ತು ಅಗತ್ಯದ ಬಗ್ಗೆ ರೈತರಿಗೆ ಸಮಗ್ರ ಮಾಹಿತಿ ತಲುಪಿಸಬೇಕು ಎಂದು ಹೇಳಿದರು.

ಗದಗ ಮತ್ತು ಹಾವೇರಿ ಜಿಲ್ಲೆಯ ರೈತರು, ರಾಜಕೀಯ ಪಕ್ಷಗಳು, ಸಂಘ–ಸಂಸ್ಥೆಗಳು, ಮಠಾಧೀಶರು ಹಾಗೂ ಜನಪ್ರತಿನಿಧಿಗಳನ್ನು ಒಳಗೊಂಡ ಬೃಹತ್ ಸಭೆ ಆಯೋಜಿಸಿ, ಎಲ್ಲರೂ ಒಗ್ಗೂಡಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಯೋಜನೆಯ ಅಗತ್ಯ ಮನವರಿಕೆ ಮಾಡಬೇಕು. ಬಳಿಕ ಕೇಂದ್ರ ಸಚಿವರನ್ನೂ ಭೇಟಿ ಮಾಡಿ ಯೋಜನೆಗೆ ಒತ್ತಾಯಿಸಬೇಕು ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಮಾಜಿ ಸಂಸದ ಮಂಜುನಾಥ ಕುನ್ನೂರ ಮಾತನಾಡಿ, 28 ಟಿಎಂಸಿ ನೀರು ದೊರೆಯುವ ಅವಕಾಶವಿರುವಾಗ ಯೋಜನೆಗಾಗಿ ಸಂಘಟಿತ ಹೋರಾಟ ನಡೆಸಬೇಕು. ಯೋಜನೆಗೆ ಸಂಬಂಧಿಸಿದ ಎಲ್ಲ ಅಂಶಗಳನ್ನು ಸಮಗ್ರವಾಗಿ ಚರ್ಚಿಸಿ ಮುಂದಿನ ಹೋರಾಟದ ರೂಪುರೇಷೆ ಸಿದ್ಧಪಡಿಸಬೇಕು ಎಂದು ಹೇಳಿದರು.

ಗಣ್ಯರ ಉಪಸ್ಥಿತಿ : ಸಭೆಯಲ್ಲಿ ಹಾವೇರಿ ಹುಕ್ಕೇರಿಮಠದ ಸದಾಶಿವ ಸ್ವಾಮೀಜಿ, ನೆಗಳೂರು ಸಂಸ್ಥಾನ ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮೀಜಿ, ಕೂಡಲದ ಗುರು ಮಹೇಶ್ವರ ಶಿವಾಚಾರ್ಯ ಸ್ವಾಮೀಜಿ, ಹೊಸಮಠದ ಬಸವಶಾಂತಲಿಂಗ ಸ್ವಾಮೀಜಿ, ಅಡವಿ ಸ್ವಾಮಿಮಠದ ಕುಮಾರ ಶ್ರೀ, ಅಗಡಿ ಅಕ್ಕಿಮಠದ ಗುರುಲಿಂಗ ಸ್ವಾಮೀಜಿ, ಶಾಸಕರಾದ ಶ್ರೀನಿವಾಸ ಮಾನೆ, ಯು.ಬಿ. ಬಣಕಾರ, ಬಸವರಾಜ ಶಿವಣ್ಣನವರ, ರೈತ ಸಂಘದ ಜಿಲ್ಲಾಧ್ಯಕ್ಷ ರಾಮಣ್ಣ ಕೆಂಚಳ್ಳೇರ, ಮಾಜಿ ಶಾಸಕರಾದ ವಿರೂಪಾಕ್ಷಪ್ಪ ಬಳ್ಳಾರಿ, ಶಿವರಾಜ ಸಜ್ಜನರ, ವಕೀಲ ಸಂದೀಪ ಪಾಟೀಲ, ರವಿಕಾಂತ ಅಂಗಡಿ, ಭುವನೇಶ್ವರ ಶಿಡ್ಲಾಪುರ ಸೇರಿದಂತೆ ರೈತ ಮುಖಂಡರು ಪಾಲ್ಗೊಂಡಿದ್ದರು.

ಮೊದಲ ಪುಟದಿಂದ.....

ಸಿಎಂ ಮುಂದೆಯೇ ಪತ್ರಿಯಿಂದ...

ಲಕ್ಷ ವೇತನ; ಕರ್ತವ್ಯದಲ್ಲಿ ನಿರ್ಲಕ್ಷ್ಯ! : ಶಿಕ್ಷಕರ ಕೊರತೆಗಿಂತ ಶಿಕ್ಷಕರ ದಕ್ಷತೆ ಮತ್ತು ಸಂವಹನದ ಸಮಸ್ಯೆ ದೊಡ್ಡದಾಗಿದೆ. ತಮ್ಮ ಶಾಲೆಯೊಂದರಲ್ಲಿ ಲಕ್ಷಕ್ಕೂ ಅಧಿಕ ವೇತನ ಪಡೆಯುತ್ತಿದ್ದ ಶಿಕ್ಷಕರು ವಾರದಲ್ಲಿ ಐದು ದಿನವೂ ಸರಿಯಾಗಿ ಶಾಲೆಗೆ ಹಾಜರಾಗುತ್ತಿರಲಿಲ್ಲ.

ಆದರೆ ದತ್ತು ಪಡೆದ ಸಂಸ್ಥೆಗಳಿಗೆ ಶಿಕ್ಷಕರ ಕಾರ್ಯವೈಖರಿಯನ್ನು ಪ್ರಶ್ನಿಸುವ ಅಥವಾ ಮೇಲ್ವಿಚಾರಣೆ ನಡೆಸುವ ಅಧಿಕಾರವಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸರ್ಕಾರ ಅತಿಥಿ ಶಿಕ್ಷಕರಿಗೆ ಕೇವಲ 11 ಸಾವಿರ ರೂ. ಗೌರವಧನ ನೀಡುತ್ತಿದೆ. ಕಡಿಮೆ ಸಂಬಳದಿಂದ ಅವರ ಕಾರ್ಯಕ್ಷಮತೆಯ ಮೇಲೂ ಪರಿಣಾಮವಾಗಬಹುದು. ಹೀಗಾಗಿ ತಮ್ಮ ಶಾಲೆಯಲ್ಲಿ ಅತಿಥಿ ಶಿಕ್ಷಕರಿಗೆ ಹೆಚ್ಚುವರಿ ಸಂಬಳ ನೀಡಿದಾಗ ದಕ್ಷತೆ ಹೆಚ್ಚಾಯಿತು. ಇತರ ಸಿಬ್ಬಂದಿಗೂ ಪ್ರೋತ್ಸಾಹಧನ ನೀಡಿದರೆ ಜವಾಬ್ದಾರಿಯಿಂದ ಕೆಲಸ ಮಾಡುತ್ತಾರೆ. ಶಾಲೆಯನ್ನು ದೇವಾಲಯದಂತೆ ಕಾಣುತ್ತಾರೆ ಎಂದರು. ಮೂರು ವರ್ಷ ಒಂದೇ ಶಾಲೆಯಲ್ಲಿ ಸೇವೆ ಕಡ್ಡಾಯವಾಗಲಿ : ಶಾಲೆಗಳಲ್ಲಿ ಪಾಠ, ಊಟದ ಜತೆಗೆ ಕ್ರೀಡೆಗೂ ಆದ್ಯತೆ ನೀಡಬೇಕು. ಶಿಕ್ಷಕರು ಕನಿಷ್ಠ ಮೂರು ವರ್ಷ ಒಂದೇ ಶಾಲೆಯಲ್ಲಿ ಸೇವೆ ಸಲ್ಲಿಸುವಂತಾಗಬೇಕು. ಶಾಲೆಗಳ ಕಾರ್ಯನಿರ್ವಹಣಾ ಅವಧಿಯಲ್ಲಿ ಅಗತ್ಯಕ್ಕೆ ತಕ್ಕ ನಮ್ಯತೆ ಇರಬೇಕು. ಗ್ರಾಮೀಣ ವಿದ್ಯಾರ್ಥಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಬೇಕು. ಶಿಕ್ಷಕರ ಸಂವಹನ ಸಮಸ್ಯೆ ನಿವಾರಿಸಿ, ಅವರ ಕಾರ್ಯವೈಖರಿಗೆ ಉತ್ತರದಾಯಿತ್ವ ನಿಗದಿಪಡಿಸಬೇಕು ಎಂದು ಸಲಹೆ ನೀಡಿದರು.

ಸೌಲಭ್ಯ ಕೊಟ್ಟರೆ ಸಾಲದು, ಬಳಕೆಯ ಲೆಕ್ಕವೂ ಇರಲಿ! : ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಿಎಸ್ಆರ್ ಸಂಸ್ಥೆಗಳು ಕೈಜೋಡಿಸುತ್ತಿರುವುದು ಉತ್ತಮ ಬೆಳವಣಿಗೆ. ಆದರೆ ಕಟ್ಟಡ, ಕಂಪ್ಯೂಟರ್, ಪ್ರಯೋಗಾಲಯಗಳನ್ನು ಒದಗಿಸುವುದಷ್ಟೇ ಅಭಿವೃದ್ಧಿಯಲ್ಲ. ಅವುಗಳ ಬಳಕೆ, ನಿರ್ವಹಣೆ ಹಾಗೂ ಮಕ್ಕಳಿಗೆ ದೊರೆಯುತ್ತಿರುವ ಶಿಕ್ಷಣದ ಗುಣಮಟ್ಟದ ಮೇಲೂ ನಿಗಾ ಇರಬೇಕು ಎಂಬ ಐಶ್ವರ್ಯಾ ಅವರ ನೇರ ಮಾತುಗಳು ಸಭೆಯ ಗಮನ ಸೆಳೆದವು.

ವಿದ್ಯಾರ್ಥಿಗಳ ಕ್ರಿಯಾಶೀಲತೆಗೆ ಪೂರಕ ಬಹುಶಿಸ್ತೀಯ ಪ್ರದರ್ಶನ: ಡಾ. ರಾಜಶೇಖರ ಪವಾಡಶೆಟ್ಟರ



ಪಾಂಡವ ನ್ಯೂಸ್, ಗದಗ: ವಿದ್ಯಾರ್ಥಿಗಳಲ್ಲಿ ಕ್ರಿಯಾಶೀಲತೆ, ಸೃಜನಶೀಲತೆ ಹಾಗೂ ಜ್ಞಾನ ವೃದ್ಧಿಸುವುದರ ಜತೆಗೆ ತಮ್ಮ ಮಾದರಿಗಳ ಕುರಿತು ವೀಕ್ಷಕರಿಗೆ ವಿವರಿಸುವ ಮೂಲಕ ಆತ್ಮವಿಶ್ವಾಸ ಮತ್ತು ಸಂವಹನ ಕೌಶಲ ಬೆಳೆಸಲು ಬಹುಶಿಸ್ತೀಯ ವಸ್ತುಪ್ರದರ್ಶನ ಸಹಕಾರಿಯಾಗಿದೆ ಎಂದು ಡಾ. ರಾಜಶೇಖರ ಪವಾಡಶೆಟ್ಟರ ಹೇಳಿದರು.

ಕೆಎಲ್ಇ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಬಹುಶಿಸ್ತೀಯ ವಸ್ತುಪ್ರತ್ಯಕ್ಷಿಕೆ ಪ್ರದರ್ಶನ 'ದರ್ಶನ–2.0' ಉದ್ಘಾಟಿಸಿ ಮಾತನಾಡಿದರು.

ವಿಜ್ಞಾನಕ್ಕೆ ಸೀಮಿತವಾಗಿದ್ದ ಪ್ರಾತ್ಯಕ್ಷಿಕೆ ಪ್ರದರ್ಶನವನ್ನು ಸಮಾಜ ವಿಜ್ಞಾನ, ಭಾಷೆ, ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಿಗೂ ವಿಸ್ತರಿಸಿರುವುದು ಶ್ಲಾಘನೀಯ. ಪುಸ್ತಕದ ಜ್ಞಾನವನ್ನು ಪ್ರಾಯೋಗಿಕವಾಗಿ ಅರ್ಥೈಸಿಕೊಳ್ಳಲು ಇಂತಹ ವೇದಿಕೆಗಳು ನೆರವಾಗುತ್ತವೆ.

ವಿದ್ಯಾರ್ಥಿಗಳಲ್ಲಿನ ಸುಪ್ತ ಪ್ರತಿಭೆ ಹಾಗೂ ಸೃಜನಶೀಲತೆ ಅನಾವರಣಗೊಳ್ಳಲು ಇವು ಉತ್ತಮ ಅವಕಾಶಗಳಾಗಿವೆ ಎಂದರು.

ನಿವೃತ್ತ ಪ್ರಾಚಾರ್ಯ ಡಾ. ಸಿ.ಎಸ್. ಹಸಬಿ ಮಾತನಾಡಿ, ವಿದ್ಯಾರ್ಥಿಗಳಲ್ಲಿರುವ ಹಿಂಜರಿಕೆ ಮತ್ತು ಕೀಳರಿಮೆ ದೂರ ಮಾಡಿ ಪ್ರತಿಭೆ ಪ್ರದರ್ಶಿಸಲು 'ದರ್ಶನ–2.0' ಉತ್ತಮ ವೇದಿಕೆಯಾಗಿದೆ. ಕಲಾ ಮತ್ತು ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳಿಗೂ ಉಜ್ವಲ ಭವಿಷ್ಯವಿದೆ ಎಂದರು.

ಪ್ರಾಚಾರ್ಯ ಡಾ. ಎ.ಕೆ. ಮಠ ಮಾತನಾಡಿ, ವಿಜ್ಞಾನ ವಿಷಯಗಳಿಗೆ ಸೀಮಿತವಾಗಿದ್ದ ಪ್ರದರ್ಶನವನ್ನು ಕಲಾ ಮತ್ತು ವಾಣಿಜ್ಯ ವಿಷಯಗಳಿಗೂ ವಿಸ್ತರಿಸುವ ಮೂಲಕ ಮಹಾವಿದ್ಯಾಲಯ ಹೊಸ ಪ್ರಯತ್ನಕ್ಕೆ ಮುಂದಾಗಿದೆ. ಸಾಮಾಜಿಕ ಸಾಮರಸ್ಯ, ಭಾವೈಕ್ಯತೆ ಹಾಗೂ ವಿದ್ಯಾರ್ಥಿಗಳ ಸೃಜನಶೀಲ ಬೆಳವಣಿಗೆಗೆ ಇಂತಹ ಪ್ರದರ್ಶನಗಳು ಪೂರಕವಾಗಿವೆ ಎಂದರು.


ಪ್ರದರ್ಶನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ 28 ತಂಡಗಳು ಭಾಗವಹಿಸಿದ್ದವು. ಮೂರು ಗಂಟೆಗಳ ಕಾಲ ನಡೆದ ಮೌಲ್ಯಮಾಪನದಲ್ಲಿ ಡಾ. ಸಿ.ಎಸ್. ಹಸಬಿ, ಪ್ರೊ. ಹೊನ್ನಗಣ್ಣನವರ ಹಾಗೂ ಪ್ರೊ. ಚಂದ್ರಪ್ಪ ಬಾರಂಗಿ ನಿರ್ಣಾಯಕರಾಗಿ ಪಾಲ್ಗೊಂಡಿದ್ದರು.

ಗದಗದ ಎ.ಎಸ್.ಎಸ್. ವಾಣಿಜ್ಯ ಮಹಾವಿದ್ಯಾಲಯ ಪ್ರಥಮ ಸ್ಥಾನ ಪಡೆದು 5 ಸಾವಿರ ನಗದು ಹಾಗೂ ಪ್ರಮಾಣಪತ್ರ, ಗದಗ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ದ್ವಿತೀಯ ಸ್ಥಾನ ಪಡೆದು 4 ಸಾವಿರ ನಗದು ಹಾಗೂ ಪ್ರಮಾಣಪತ್ರ ಗಳಿಸಿತು. ಇತರೆ ಮೂರು ತಂಡಗಳಿಗೂ ನಗದು ಬಹುಮಾನ ಮತ್ತು ಪ್ರಮಾಣಪತ್ರ ವಿತರಿಸಲಾಯಿತು. ಭಾಗವಹಿಸಿದ ಎಲ್ಲ ತಂಡಗಳ ಸದಸ್ಯರಿಗೆ ಪ್ರಮಾಣಪತ್ರ ನೀಡಲಾಯಿತು.

ಮಹಾವಿದ್ಯಾಲಯದ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿವಿಧ ಕಾಲೇಜುಗಳ ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಕಬ್ಬೂರ ಜಿಪಂ ಕ್ಷೇತ್ರಕ್ಕೆ ಪುಟ್ಟಪ್ಪ ಕುರಿ ಪ್ರಬಲ ಆಕಾಂಕ್ಷಿ

ಅಹಿಂದ ಸಂಘಟನೆಯ ಬೆಂಬಲ; ನಾಲ್ಕು ದಶಕಗಳ ಕಾಂಗ್ರೆಸ್ ನಂಟು



ಪಾಂಡವ ನ್ಯೂಸ್, ಹಾವೇರಿ: ತಾಲೂಕಿನ ಕಬ್ಬೂರ ಜಿಲ್ಲಾ ಪಂಚಾಯಿತಿ ಕ್ಷೇತ್ರದಿಂದ ಕಾಂಗ್ರೆಸ್ ಮುಖಂಡ ಪುಟ್ಟಪ್ಪ ಬಸಪ್ಪ ಕುರಿ ಅವರು ಸ್ಪರ್ಧಿಸಲು ಪ್ರಬಲ ಆಕಾಂಕ್ಷಿಯಾಗಿದ್ದು, ಅಹಿಂದ ಸಂಘಟನೆಯ ಪ್ರಮುಖರು ಬೆಂಬಲ ವ್ಯಕ್ತಪಡಿಸಿದ್ದಾರೆ.

ಚಿಕ್ಕಲಿಂಗದಹಳ್ಳಿ ಗ್ರಾಮದ ನಿವಾಸಿಯಾಗಿರುವ ಪುಟ್ಟಪ್ಪ ಕುರಿ ಅವರು ಕಳೆದ ನಾಲ್ಕು ದಶಕಗಳಿಂದ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ಪಕ್ಷದ ಸಂಘಟನೆ ಹಾಗೂ ಚುನಾವಣೆಗಳಲ್ಲಿ ಶ್ರಮಿಸಿದ್ದಾರೆ. ಶಾಸಕ ಬಸವರಾಜ ಶಿವಣ್ಣನವರ ಅವರ ಆಪ್ತರಾಗಿರುವ ಇವರು,

ಮಾಜಿ ಜಿಪಂ ಸದಸ್ಯ ಎಸ್.ಎಫ್. ಎನ್. ಗಾಜಿಗೌಡ್ರ ಅವರ ಗೆಲುವಿಗೂ ಶ್ರಮಿಸಿದ್ದಾರೆ.

ಇವರ ಪತ್ನಿ ಈ ಹಿಂದೆ ಗ್ರಾಮ ಪಂಚಾಯಿತಿ ಸದಸ್ಯೆಯಾಗಿ ಸೇವೆ ಸಲ್ಲಿಸಿದ್ದು, ಕಾಂಗ್ರೆಸ್ ಆಡಳಿತಾವಧಿಯಲ್ಲಿ ಪುಟ್ಟಪ್ಪ ಕುರಿ ಅವರನ್ನು ಅಕ್ರಮ–ಸಕ್ರಮ ಸಮಿತಿ ಸದಸ್ಯರನ್ನಾಗಿ ನೇಮಿಸಲಾಗಿತ್ತು. ಅಹಿಂದ ವರ್ಗಗಳ ಹಕ್ಕು ಮತ್ತು ಅಭಿವೃದ್ಧಿಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ಇವರು, ಸರ್ವ ಜನಾಂಗದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ.

ಅಹಿಂದ ಸಂಘಟನೆಯ ರಾಜ್ಯಾಧ್ಯಕ್ಷ ಮುತ್ತಣ್ಣ ಶಿವಳ್ಳಿ ಅವರ ನಿರ್ದೇಶನದ ಮೇರೆಗೆ ಹಾವೇರಿ ಜಿಲ್ಲೆಯ ಸಂಘಟನೆಯ ಪ್ರಮುಖರು ಪುಟ್ಟಪ್ಪ ಕುರಿ ಅವರ ಬೆಂಬಲಕ್ಕೆ ನಿಂತಿದ್ದಾರೆ.

ಜಿಲ್ಲಾಧ್ಯಕ್ಷ ಪರಮೇಶ ದೇಸಳ್ಳಿ, ಕಾನೂನು ಘಟಕದ ಅಧ್ಯಕ್ಷ ಜಗದೀಶ ಮಲ್ಲಿಕೇರಿ, ರಾಜ್ಯ ಮುಖಂಡ ಉಡಣಪ್ಪ ಮಾಳಗಿ, ರಾಜ್ಯ ಉಪಾಧ್ಯಕ್ಷ ನಾಗರಾಜ ಬಾಲಣ್ಣನವರ,

ಮಹಿಳಾ ಘಟಕದ ಅಧ್ಯಕ್ಷೆ ಯಲ್ಲಪ್ಪ ಹರಿಜನ, ಮಹಿಳಾ ರಾಜ್ಯ ಉಪಾಧ್ಯಕ್ಷೆ ಜ್ಯೋತಿ ಉಳಗುಂದಿ, ಪದಾಧಿಕಾರಿಗಳಾದ ಭಾರತಿ ಮರಾಠಿ, ಮಹಾಂತೇಶ ಹಟ್ಟಿ, ಮಣಿಕಂಠ ಬಳ್ಳಾರಿ ಸೇರಿದಂತೆ ಹಲವು ಮುಖಂಡರು ಬೆಂಬಲ ಸೂಚಿಸಿದ್ದಾರೆ.

ಕಾಂಗ್ರೆಸ್ ಪಕ್ಷದಿಂದ ಟಿಕೆಟ್ ದೊರೆಯುವ ವಿಶ್ವಾಸವಿದೆ. ಟಿಕೆಟ್ ಲಭಿಸದಿದ್ದರೂ ಅಹಿಂದ ಸಂಘಟನೆಯ ಬೆಂಬಲದೊಂದಿಗೆ ಚುನಾವಣೆಗೆ ಸ್ಪರ್ಧಿಸಲು ಸಿದ್ಧನಿದ್ದೇನೆ.

ಕಬ್ಬೂರ ಕ್ಷೇತ್ರದ ಜನರ ಸೇವೆ ಮಾಡುವ ಉದ್ದೇಶದಿಂದ ಈ ಬಾರಿ ಸ್ಪರ್ಧಿಸುವ ನಿರ್ಧಾರ ಕೈಗೊಂಡಿದ್ದೇನೆ ಎಂದು ಪುಟ್ಟಪ್ಪ ಕುರಿ ತಿಳಿಸಿದ್ದಾರೆ.

ರೈತ ಸಂಘ ಹಾಗೂ ಜಿಲ್ಲಾ ಕಬ್ಬು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದಿಂದ ದೀಢೀರ್ ಪ್ರತಿಭಟನೆ



ಪಾಂಡವ ನ್ಯೂಸ್, ಗುತ್ತಲ : ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜೇರಿ ಹಾಗೂ ಶಶಿಕಾಂತ ಗೂರೂಜಿ ಸೇರಿದಂತೆ ಬಂದಿಸ್ವಲಟ್ಟ ಕಬ್ಬು ಬೆಳೆಗಾರರನ್ನು ಗುರುವಾರವೇ ಬಿಡುಗಡೆ ಮಾಡಬೇಕು ಇಲ್ಲದಿದ್ದರೇ ನ.6ರ ಶುಕ್ರವಾರ ಹಾವೇರಿ ಜಿಲ್ಲೆಯನ್ನು ಬಂದ್ ಮಾಡುವುದಾಗಿ ರಾಜ್ಯ ಸರ್ಕಾರಕ್ಕೆ ಜಿಲ್ಲಾ ಕಬ್ಬು ಬೆಳೆಗಾರರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ಅಶೋಕರಡ್ಡಿ ಮರ್ಚರಡ್ಡೇರ ಎಚ್ಚರಿಕೆ ನೀಡಿದರು.

ಪಟ್ಟಣದ ಎಸ್ಆರ್ಎಸ್ ಸರ್ಕಲ್ ಬಳಿ ಧಿಡೀರ್ ಪ್ರತಿಭಟನೆ ನಡೆಸಿದ ಕಬ್ಬು ಬೆಳೆಗಾರರು ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಬೆಳಗಾವಿಯಲ್ಲಿ ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜೇರಿ ಹಾಗೂ ಶಶಿಕಾಂತ ಗೂರೂಜಿ ಹಾಗೂ ಅನೇಕ ಕಬ್ಬು ಬೆಳಗಾರರನ್ನು ಪೊಲೀಸರು ಬಂದಿಸಿದ್ದಾರೆ. ಅವರನ್ನು ಗುರುವಾರ ಸಂಜೆಯೊಳಗೆ ಬಿಡುಗಡೆ ಮಾಡುಬೇಕೆಂದು ಆಗ್ರಹಿಸಿದರು.

ರೈತರ ಹಾಗೂ ಕಬ್ಬು ಬೆಳೆಗಾರರ ಪರವಾಗಿ ಕೆಳೆದ 2 ತಿಂಗಳಿನಿಂದ ಹೋರಾಡುತ್ತಿದ್ದ ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜೇರಿ ಹಾಗೂ ಶಶಿಕಾಂತ ಗೂರೂಜಿ ಅವರು ಸೇರಿದಂತೆ ಅನೇಕ ರೈತರನ್ನು ಪೊಲೀಸರ ಬಂಧಿಸಿದ್ದು ಖಂಡನೀಯ ಎಂದ ಅವರು ನಿಜವಾಗಿಯೂ ಕಬ್ಬು ಬೆಳೆಗಾರರಿಗೆ ನ್ಯಾಯವನ್ನು ಒದಗಿಸಬೇಕಾಗಿದ್ದ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ವಿಫಲವಾಗಿವೆ.

ರಾಜ್ಯ ಸರ್ಕಾರ ಎಸ್ಎಪಿಯನ್ನು ಹಾಗೂ ಕೇಂದ್ರ ಸರ್ಕಾರ ಎಂಎಸ್ಪಿಯನ್ನು ಘೋಷಣೆ ಮಾಡಬೇಕು ಇದರಿಂದ ಕಬ್ಬು ಬೆಳೆಗಾರರಿ

ಪ್ರಮುಖ ಸಂಕ್ಷಿಪ್ತ ಸುದ್ದಿ

ಬದುಕಿನ ಭಾಷೆ ಕನ್ನಡವಾಗಲಿ : ಬಸವಶಾಂತಲಿಂಗ ಶ್ರೀ



ಪಾಂಡವ ನ್ಯೂಸ್, ಹಾವೇರಿ : ನಗರ ಶ್ರೀ ಹೊಸಮಠದಲ್ಲಿ ಬಸವಕೇಂದ್ರ ಶ್ರೀಹೊಸಮಠ, ಕನ್ನಡ ಜಾಗೃತಿ ಸಮಿತಿ ಹಾವೇರಿ, ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಶರಣ ಸಂಗಮ ಮತ್ತು ಕವಿಗೋಷ್ಠಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮವನ್ನು ಶ್ರೀ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವುದರ ಮೂಲಕ ಶ್ರೀಹೊಸಮಠದ ಬಸವಶಾಂತಲಿಂಗ ಉದ್ಘಾಟಿಸಿದರು.

ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀ ಬಸವಶಾಂತಲಿಂಗ ಸ್ವಾಮೀಜಿಗಳು ಯಾವ ಭಾಷಾ ವಿಜ್ಞಾನ, ತಂತ್ರಜ್ಞಾನಗಳೊಂದಿಗೆ ತನ್ನನ್ನು ಬೆಸದುಕೊಳ್ಳತ್ತದಯೋ ಆ ಭಾಷಾ ಸಮೃದ್ಧವಾಗಿರುತ್ತದೆ ಮತ್ತು ಜೀವಂತವಾಗಿರುತ್ತದೆ. ಆ ನಿಟ್ಟಿನಲ್ಲಿ ನಮ್ಮ ಬದುಕಿನ ಎಲ್ಲ ಆಯಾಮಗಳೂ ಕನ್ನಡಮಯ ಆಗುವಂತೆ ನಾವೆಲ್ಲರೂ ಪ್ರಯತ್ನಿಸಬೇಕು. ಯಾವುದೇ ವ್ಯಕ್ತಿಯಲ್ಲಿ ಆಲೋಚನೆಗಳು ಮೂಡುವುದು ಅವನ ಮಾತೃಭಾಷೆಯಲ್ಲಿಯೇ. ಅವುಗಳ ಶ್ರೇಷ್ಠ ಅಭಿವ್ಯಕ್ತಿ ಸಾಧ್ಯಾವಾಗುವುದು ಮಾತೃಭಾಷೆಯ ಮೂಲಕವೇ, ಪ್ರಭಾವಿಸುವ ನಮ್ಮ ನಾಣ್ಣುಡಿ, ಉದಯಮತ್ತು ಕನ್ನಡ ಹೃದಯವಾಗಲಿ. ಕರ್ನಾಟಕದ ಜನಜೀವನ, ಆಡಳಿತ, ಶಿಕ್ಷಣ, ಮತ್ತು ವ್ಯವಹಾರಗಳಲ್ಲಿ ಹಾಗೂ ಜಾನಪದ, ಸಂಗೀತ, ರಂಗಭೂಮಿ ಸಿನಿಮಾರಂಗಕ್ಕೆ ಕನ್ನಡವೇ ಜೀವನಾಡಿಯಾಗಿದೆ ಎಂದರು.

ಕನ್ನಡ ಜಾಗೃತಿ ಸಮಿತಿ ಸದಸ್ಯ ಡಾ.ಹೊನ್ನಪ್ಪ ಹೊನ್ನಪ್ಪನವರ ಪ್ರಾಸ್ತಾವಿಕವಾಗಿ ಮಾತನಾಡಿದರು.ವಿರೇಶ ಹಿತ್ತಲಮನಿ ಉಪನ್ಯಾಸ ನೀಡಿದರು. ಡಾ. ಸಿ. ಎಸ್.ಕಮ್ಮಾರ, ಕುಮಾರ ಮಡಿವಾಳರ, ಬಿ.ಎಮ್.ಬೇವಿನಮರದ ವೇದಿಕೆಯಲ್ಲಿ ಉಪಸ್ಥಿತರಿದ್ದರು.ಭಾಗವಹಿದ್ದ ಕವಿಗಳು ಕವಿತೆ ವಾಚನೆ ಮಾಡಿದರು. ಮಮತಾ ನಂದಿಹಳ್ಳಿ ಪ್ರಾರ್ಥಿಸಿದರು.ಜಿ.ಎಂ.ಓಂಕಾರಣ್ಣವರ ಸ್ವಾಗತಿಸಿದರು.ಅನಿತಾ ಉಪಲಿ ನಿರೂಪಿಸಿದರು. ರಂಜನಾ ಭಟ್ ವಂದಿಸಿದರು.ಶ್ರೀ ಹೊಸಮಠದ ಹಾಗೂ ಹಿತ್ತಲಮನಿ ಗುರುಕುಲಂನ ವಿದ್ಯಾರ್ಥಿಗಳು ಕನ್ನಡ ನಾಡು-ನುಡಿ ಸಂಸ್ಕೃತಿ ನೃತ್ಯ ಪ್ರದರ್ಶನ ಮಾಡಿದರು.

ವಕೀಲರ ಮೇಲಿನ ಹಲ್ಲೆ ಖಂಡಿಸಿ ಬ್ಯಾಡಗಿ ವಕೀಲರ ಸಂಘದಿಂದ ಪ್ರತಿಭಟನೆ

ಪಾಂಡವ ನ್ಯೂಸ್, ಬ್ಯಾಡಗಿ : ರಾಜ್ಯದ ವಿವಿಧೆಡೆ ವಕೀಲರ ಮೇಲೆ ನಡೆಯುತ್ತಿರುವ ಹಲ್ಲೆ, ದೌರ್ಜನ್ಯ ಹಾಗೂ ಹತ್ಯೆ ಪ್ರಕರಣಗಳನ್ನು ಖಂಡಿಸಿ, ವಕೀಲರಿಗೆ ಸೂಕ್ತ ರಕ್ಷಣೆ ಒದಗಿಸುವಂತೆ ಆಗ್ರಹಿಸಿ ಬ್ಯಾಡಗಿ ವಕೀಲರ ಸಂಘದ ವತಿಯಿಂದ ತಹಶೀಲ್ದಾರ್ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಕೀಲರ ಸಂಘದ ಅಧ್ಯಕ್ಷ ರಾಜು ಶಿಡೇನೂರ ನ್ಯಾಯಾಂಗ ವ್ಯವಸ್ಥೆಯ ಪ್ರಮುಖ ಭಾಗವಾಗಿದ್ದು, ಸಮಾಜದಲ್ಲಿ ನ್ಯಾಯ ಮತ್ತು ಕಾನೂನಿನ ರಕ್ಷಣೆಗಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ನ್ಯಾಯದಾನ ಪ್ರಕ್ರಿಯೆಯಲ್ಲಿ ಮಹತ್ವದ ಪಾತ್ರ ವಹಿಸುವ ವಕೀಲರ ಮೇಲೆಯೇ ಹಲ್ಲೆ ಹಾಗೂ ಹತ್ಯೆ ನಡೆಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ಘಟನೆಗಳು ವಕೀಲರ ವೃತ್ತಿ ಸ್ವಾತಂತ್ರ್ಯ ಮತ್ತು ಸುರಕ್ಷತೆಗೆ ಧಕ್ಕೆ ತರುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.

ವಕೀಲರ ಮೇಲೆ ನಡೆಯುತ್ತಿರುವ ಹಲ್ಲೆ ಮತ್ತು ದೌರ್ಜನ್ಯ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ವಕೀಲರ ವೃತ್ತಿಯ ಸುರಕ್ಷತೆ ಹಾಗೂ ಸ್ವತಂತ್ರ ಕಾರ್ಯನಿರ್ವಹಣೆಗೆ ಪೂರಕವಾಗಿ ಪ್ರತ್ಯೇಕ ವಕೀಲರ ರಕ್ಷಣಾ ಕಾಯ್ದೆಯನ್ನು ಜಾರಿಗೆ ತರಬೇಕು. ವಕೀಲರ ಮೇಲೆ ಹಲ್ಲೆ ನಡೆಸುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ವಕೀಲರಿಗೆ ನಿರ್ಭೀತಿಯಿಂದ ವೃತ್ತಿ ನಿರ್ವಹಿಸಲು ಅಗತ್ಯ ಭದ್ರತೆ ಕಲ್ಪಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.ನ್ಯಾಯಾಂಗ ವ್ಯವಸ್ಥೆಯ ಘನತೆ ಮತ್ತು ಕಾನೂನಿನ ಆಡಳಿತವನ್ನು ಕಾಪಾಡುವ ನಿಟ್ಟಿನಲ್ಲಿ ವಕೀಲರ ರಕ್ಷಣೆಗೆ ಸರ್ಕಾರ ಆದ್ಯತೆ ನೀಡಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಸೂಕ್ತ ಕಾನೂನು ರೂಪಿಸಿ ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಲಾಯಿತು.ಈ ಸಂದರ್ಭದಲ್ಲಿ ವಕೀಲರಾದ ಪ್ರಕಾಶ ಬನ್ನಿಹಟ್ಟಿ, ಎಂ.ಜೆ. ಮುಲ್ಲಾ, ನಿಜಗುಣ ಮುಚ್ಚಟ್ಟಿ, ಡಿ.ಎಚ್. ಬುಡ್ಡನಗೌಡ್ರ, ನವೀನ ಮುಳಗುಂದ, ಜಿ.ಬಿ. ಯಲಗಚ್ಚ, ಎಚ್.ಜಿ. ಮುಳಗುಂದ, ಎಂ.ಎಸ್. ಕುಮಾರೂರು, ಬಿ.ಎಸ್. ಕುಲಕರ್ಣಿ, ಮಂಜುಳಾ ಜಿಗಳಿ, ಎಸ್.ಎಚ್. ಕಾಟೇನಹಳ್ಳಿ, ಶಿವಪ್ಪ ಹೊಸಮನಿ, ಶಂಕರ ನಾಯಕ, ಎನ್.ಬಿ. ಬಳ್ಳಿಗಾರ, ಎಂ.ಎಂ. ಮುಚ್ಚಟ್ಟಿ, ಜಿ.ಎನ್. ಹುಚ್ಚೇರ, ಮಂಜು ಹಂಜಗಿ, ಎಸ್.ಪಿ. ಪೂಜಾರ, ಎಂ.ಬಿ. ಬಳ್ಳಿಗಾರ, ಎಂ.ಎ. ಮುಲ್ಲಾ, ಎಚ್.ಆರ್. ಜಿ.ಬಿ. ಬಳ್ಳಿಗಾರ, ಲಮಾಣಿ, ಎಂ.ಜಿ. ಹಿರೇಮಠ, ಎಂ.ಎ. ಮಾಳಿ, ಎನ್.ಎಂ. ಹುಬ್ಬಳ್ಳಿ ಸೇರಿದಂತೆ ಹಲವು ವಕೀಲರು ಉಪಸ್ಥಿತರಿದ್ದರು.

ನ. 30ರವರೆಗೆ ತುಂಗಭದ್ರಾ ಕಾಲುವೆಗಳಿಗೆ ನೀರು ಹರಿಸಲು ಮನವಿ

ರೈತರ ಹಿತ ಕಾಪಾಡುವುದೇ ಸರ್ಕಾರದ ಆದ್ಯತೆ: ಬಿ. ನಾಗೇಂದ್ರ



ಪಾಂಡವ ನ್ಯೂಸ್, ಬೆಂಗಳೂರು: ತುಂಗಭದ್ರಾ ಜಲಾಶಯವನ್ನು ಅವಲಂಬಿಸಿರುವ ಬಳ್ಳಾರಿ, ರಾಯಚೂರು ಹಾಗೂ ಕೊಪ್ಪಳ ಜಿಲ್ಲೆಗಳ ರೈತರ ಬೆಳೆಗಳಿಗೆ ಮತ್ತು ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯತೆ ಪೂರೈಸಲು ನವೆಂಬರ್ 30ರವರೆಗೆ ಕಾಲುವೆಗಳಿಗೆ ನೀರು ಹರಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ಬಳ್ಳಾರಿ ಗ್ರಾಮಾಂತರ ಶಾಸಕ ಹಾಗೂ ಮಾಜಿ ಸಚಿವ ಬಿ. ನಾಗೇಂದ್ರ ತಿಳಿಸಿದರು.

ಅಕ್ಟೋಬರ್ 19ರಂದು ನಡೆದ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 20ರವರೆಗೆ ಕಾಲುವೆಗಳಿಗೆ ನೀರು ಹರಿಸಲು ನಿರ್ಧರಿಸಲಾಗಿತ್ತು. ಆದರೆ, ಮಳೆಯ ಕೊರತೆಯಿಂದಾಗಿ ರೈತರ ಬೆಳೆಗಳು ಕಟಾವಿನ ಹಂತದಲ್ಲಿದ್ದು, ಇಳುವರಿ ಸಮರ್ಪಕವಾಗಿ ದೊರೆಯಲು ಇನ್ನೂ 10 ದಿನಗಳ ಕಾಲ ನೀರು ಪೂರೈಸುವುದು ಅಗತ್ಯವಾಗಿದೆ ಎಂದು ಮನವಿ ಮಾಡಿದರು.

ಹೆಚ್ಚುವರಿಯಾಗಿ ನೀರು ಹರಿಸಿದರೆ ಭತ್ತ, ಜೋಳ ಹಾಗೂ ಮೆಣಸಿನಕಾಯಿ ಬೆಳೆಗಳಿಗೆ ಅನುಕೂಲವಾಗಲಿದೆ. ಇದರಿಂದ ರೈತರು ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುವುದಲ್ಲದೆ, ಆರ್ಥಿಕ ಸಂಕಷ್ಟದಿಂದಲೂ ಚೇತರಿಸಿಕೊಳ್ಳಲು ನೆರವಾಗಲಿದೆ. ಅಲ್ಲದೆ, ಮುಂಬರುವ ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಕೆರೆಗಳಲ್ಲಿ ನೀರು ಸಂಗ್ರಹಿಸಿಟ್ಟುಕೊಳ್ಳಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ರೈತರ ಹಿತ ಕಾಪಾಡುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ರೈತರ ಬೆಳೆಗಳಿಗೆ ಹಾಗೂ ಸಾರ್ವಜನಿಕರ ಕುಡಿಯುವ ನೀರಿನ ಅಗತ್ಯಕ್ಕೆ ಯಾವುದೇ ತೊಂದರೆಯಾಗದಂತೆ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗಿದೆ ಎಂದರು.

ಈ ಸಂದರ್ಭದಲ್ಲಿ ತುಂಗಭದ್ರಾ ಜಲಾಶಯದ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಹಾಗೂ ಸಚಿವ ಶಿವರಾಜ್ ತಂಗಡಗಿ, ವಸತಿ ಸಚಿವ ಬಿ.ಜೆ. ಜಮೀರ್ ಅಹಮದ್ ಖಾನ್, ಶಾಸಕರಾದ ಎಚ್. ಆರ್. ಗವಿಯಪ್ಪ, ಹಂಪನಗೌಡ ಬಾದರ್ಲಿ, ಬಿ.ಎಂ. ನಾಗರಾಜ್, ಬಸನಗೌಡ ತುರ್ವಿಹಾಳ, ಬಸವನಗೌಡ ಬಾದರ್ಲಿ ಹಾಗೂ ತುಂಗಭದ್ರಾ ರೈತ ಸಂಘದ ಅಧ್ಯಕ್ಷ ದರೂರು ಪುರುಷೋತ್ತಮ್ ಗೌಡ ಸೇರಿದಂತೆ ಹಲವು ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ರೈತರ ವಿದ್ಯುತ್ ಸಮಸ್ಯೆ ಪರಿಹರಿಸಲು ರೈತ ಸಂಘದಿಂದ ಮನವಿ

ರಟ್ಟಿಹಳ್ಳಿಯಲ್ಲಿ ಹೆಸ್ಕಾಂ ಸಿಬ್ಬಂದಿ ನೇಮಕ, ಟಿಸಿ ದುರಸ್ತಿಗೆ ಆಗ್ರಹ



ಪಾಂಡವ ನ್ಯೂಸ್, ರಟ್ಟಿಹಳ್ಳಿ: ಪಟ್ಟಣದ ಹೆಸ್ಕಾಂ ಕಚೇರಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕು. ಕೆಟ್ಟುಹೋದ ವಿದ್ಯುತ್ ಪರಿವರ್ತಕಗಳನ್ನು (ಟಿಸಿ) ಪರಿಶೀಲಿಸಿ ದುರಸ್ತಿಪಡಿಸುವ ವ್ಯವಸ್ಥೆಯನ್ನು ರಟ್ಟಿಹಳ್ಳಿಯಲ್ಲಿಯೇ ಕಲ್ಪಿಸಬೇಕು. ರೈತರ ವಿದ್ಯುತ್ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ ಪರಿಹಾರ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಪದಾಧಿಕಾರಿಗಳು ಆಗ್ರಹಿಸಿದರು.

ಈ ಕುರಿತು ಹುಬ್ಬಳ್ಳಿಯ ಹೆಸ್ಕಾಂ ಇಲಾಖೆಯ ವ್ಯವಸ್ಥಾಪಕ ನಿರ್ದೇಶಕರಿಗೆ ಮನವಿ ಸಲ್ಲಿಸಿದ ರೈತ ಸಂಘದ ಮುಖಂಡರು, ರಟ್ಟಿಹಳ್ಳಿ ಪಟ್ಟಣದ ಹೆಸ್ಕಾಂ ಕಚೇರಿಯಲ್ಲಿ ಸಿಬ್ಬಂದಿ ಕೊರತೆಯಿಂದ ರೈತರಿಗೆ ತೊಂದರೆಯಾಗುತ್ತಿದೆ.

ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಿ, ರೈತರ ವಿದ್ಯುತ್ ಸಮಸ್ಯೆಗಳಿಗೆ ಸ್ಥಳೀಯ ಮಟ್ಟದಲ್ಲಿಯೇ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಅತ್ಯಗತ್ಯವಾಗಿದೆ. ಜಮೀನುಗಳಲ್ಲಿ ದನದ ಕೊಟ್ಟಿಗೆ ನಿರ್ಮಿಸಿಕೊಂಡಿರುವ ರೈತರಿಗೆ ಉಚಿತ ಟಿಸಿ ವ್ಯವಸ್ಥೆ ಕಲ್ಪಿಸಬೇಕು. ವಿದ್ಯುತ್ ಪರಿವರ್ತಕಗಳು ಸುಟ್ಟುಹೋದ ಸಂದರ್ಭದಲ್ಲಿ ಅವುಗಳನ್ನು ದುರಸ್ತಿಗಾಗಿ ಸಾಗಿಸುವ ಮತ್ತು ಮರಳಿ ತಂದು ಅಳವಡಿಸುವ ಜವಾಬ್ದಾರಿಯನ್ನು ಇಲಾಖೆಯೇ ವಹಿಸಿಕೊಳ್ಳಬೇಕು. ಇದಕ್ಕಾಗಿ ರೈತರು ತಮ್ಮ ಸ್ವಂತ ವಾಹನಗಳಲ್ಲಿ ಟಿಸಿಗಳನ್ನು ಸಾಗಿಸುವ ಅನಿವಾರ್ಯತೆ ತಪ್ಪಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ರೈತರು ಕೃಷಿ ಕಾರ್ಯಗಳನ್ನು ಬಿಟ್ಟು ವಿದ್ಯುತ್ ಸಮಸ್ಯೆಗಳ ಪರಿಹಾರಕ್ಕಾಗಿ ಹೆಸ್ಕಾಂ ಕಚೇರಿಗಳಿಗೆ ಅಲೆಯುವ ಪರಿಸ್ಥಿತಿ ನಿರ್ಮಾಣವಾಗಬಾರದು. ಹೀಗಾಗಿ ರೈತರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುವ ಸಿಬ್ಬಂದಿ ವ್ಯವಸ್ಥೆ ಕಲ್ಪಿಸುವುದರ

ಜತೆಗೆ, ಟಿಸಿ ದುರಸ್ತಿ ಕಾರ್ಯವನ್ನು ಸ್ಥಳೀಯವಾಗಿ ಕೈಗೊಳ್ಳಲು ಅಗತ್ಯ ಕ್ರಮ ವಹಿಸಬೇಕು ಎಂದು ಒತ್ತಾಯಿಸಿದರು.

ರೈತರ ವಿದ್ಯುತ್ ಸಮಸ್ಯೆಗಳನ್ನು ನಿರ್ಲಕ್ಷಿಸದೆ, ಮನವಿಯಲ್ಲಿನ ಬೇಡಿಕೆಗಳನ್ನು ಆದ್ಯತೆಯ ಮೇರೆಗೆ ಈಡೇರಿಸಬೇಕು ಎಂದು ರೈತ ಸಂಘದ ಮುಖಂಡರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಲ್ಲನಗೌಡ ಸೊರಟೂರು, ಸಿದ್ದನಗೌಡ ದೊಡ್ಡಗುಬ್ಬಿ, ಶಿವಯೋಗಿ ಗುಡಿಮನಿ, ಮಂಜುನಾಥ, ಭರಮಗೌಡ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಸಂಸ್ಕೃತಿ, ಪರಂಪರೆಯನ್ನು ಉಳಿಸಿಕೊಂಡು ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ : ಪ್ರಾಚಾರ್ಯ ಪ್ರೊ. ಪಾಟೀಲ

ಪಾಂಡವ ನ್ಯೂಸ್, ಹುಬ್ಬಳ್ಳಿ: ಭಾರತೀಯ ಸಂಸ್ಕೃತಿ ಪರಂಪರೆ ಜೊತೆಗೆ ಕನ್ನಡ ಸಾಹಿತ್ಯ ಸಂಸ್ಕೃತಿ, ಉಡುಗೆ, ತೊಡುಗೆ, ಪರಂಪರೆಯನ್ನು ಉಳಿಸಿಕೊಂಡು ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಕೆ. ಎಲ್.ಇ ಸಂಸ್ಥೆಯ ಜಗದ್ಗುರು ಗಂಗಾಧರ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ ಎಸ್. ಎಲ್. ಪಾಟೀಲ ಅವರು ಹೇಳಿದರು.

ಕೆ.ಎಲ್.ಇ ಸಂಸ್ಥೆಯ ಜಗದ್ಗುರು ಗಂಗಾಧರ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಒಂದು ದಿನದ ರಾಜ್ಯ ಮಟ್ಟದ ಕನ್ನಡ ಗತವೈಭವ್ : ಪ್ರತಿಭೆ-ಸಂಸ್ಕೃತಿ-ಸೃಜನಶೀಲತೆ- ಒಗ್ಗಟ್ಟು, ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿದ್ಯಾರ್ಥಿಗಳು ಕನ್ನಡ ಸಾಂಸ್ಕೃತಿಕ, ಸಾಹಿತ್ಯಿಕ ಕಾರ್ಯಕ್ರಮಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು. ಕನ್ನಡ ಸಮೃದ್ಧ ಭಾಷೆ, ಭಾಷೆಯನ್ನು ಬಳಸಿದ್ರೆ ಉತ್ಕೃಷ್ಟವಾಗಿ ಬೆಳೆಯುತ್ತದೆ. ಕನ್ನಡ ಗತವೈಭವ ಕಾರ್ಯಕ್ರಮದಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದು ನೋಡಿ ಬಹಳ ಸಂತೋಷವಾಗಿದೆ ಎಂದರು.

ಐ ಕ್ಯೂ ಎ ಸಿ, ಆಂತರಿಕ ಗುಣಮಟ್ಟದ ಭರವಸೆ ಕೋಶದ ಸಂಯೋಜಕ ಡಾ.ಗುಣಿತ ಎನ್.ಎಸ್, ಸಂಘಟನಾ ಕಾರ್ಯದರ್ಶಿ, ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ನೇತ್ರಾವತಿ ಗಬ್ಬೂರ, ವಿದ್ಯಾರ್ಥಿ ಪ್ರತಿನಿಧಿ ಸಿಮ್ರೀತಾ ಲಿಂಗಡೆ ವೇದಿಕೆ ಮೇಲಿದ್ದರು. ಡಾ.ನೀತಿನ ಎನ್.ಎಸ್, ಡಾ.ಗುರು ಪಾಟೀಲ್, ಪ್ರೊ.ಪೂಜಾ ನಲವಡಿ, ಪ್ರೊ.ನಾಗನಗೌಡ ದೂಡ್ಡಗೌಡ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಶಿಕ್ಷಕರು, ವಿದ್ಯಾರ್ಥಿಗಳು ಮುಂತಾದವರು ಉಪಸ್ಥಿತರಿದ್ದರು. ವಿವಿಧ ಕಾಲೇಜಿನಿಂದ ಆಗಮಿಸಿದ್ದ ಶಿಕ್ಷಕರು, ವಿದ್ಯಾರ್ಥಿಗಳು ಕನ್ನಡ ಗತವೈಭವ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜನೆ ಮಾಡಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ವಿದ್ಯಾರ್ಥಿಗಳು ಶ್ರದ್ಧಾ , ಭಕ್ತಿಯಿಂದ ಭಾಗವಹಿಸಿದ್ದರು.



ರಂಗೋಲಿ,ವೈಯಕ್ತಿಕ ಗೀತೆ ,ಸ್ಥಳದಲ್ಲಿ ಮೋಬೈಲ ವೀಡಿಯೋ ಗ್ರಾಫಿ, ಆಶುಭಾಶಣ ,ಗುಂಪು ನೃತ್ಯ ಸ್ಪರ್ಧೆಗಳಲ್ಲಿ 125 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಾರ್ವಜನಿಕರಿಗೆ ಸೈಬರ್ ವಂಚನೆ ಎಚ್ಚರಿಕೆ

ಪಾಂಡವ ನ್ಯೂಸ್, ಹಾವೇರಿ: ಏರ್‌ಟೆಲ್ ಗ್ರಾಹಕರ ಬ್ಯಾಂಕ್ ಖಾತೆಗೆ 2,000 ಜಮೆಯಾಗಲಿದೆ ಎಂಬ ಆಮಿಷವೊಡ್ಡಿ ವಾಟ್ಸ್‌ಪ್‌ನಲ್ಲಿ ನಕಲಿ ಸಂದೇಶ ಹಾಗೂ ಲಿಂಕ್‌ಗಳನ್ನು ಹರಿಬಿಡಲಾಗುತ್ತಿದ್ದು, ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ಸೈಬರ್ ಸುರಕ್ಷತಾ ತಜ್ಞರು ಸಲಹೆ ನೀಡಿದ್ದಾರೆ.'ನಾನು ಇದನ್ನು ನಕಲಿ ಎಂದುಕೊಂಡಿದ್ದೆ. ಆದರೆ ನಿಜವಾಗಿಯೂ 2,000 ಬಂದಿದೆ. ನೀವೂ ಪ್ರಯತ್ನಿಸಿ' ಎಂಬ ಅರ್ಥದ ಸಂದೇಶದೊಂದಿಗೆ ಅಪರಿಚಿತ ಲಿಂಕ್‌ವೊಂದನ್ನು ಹಂಚಿಕೊಳ್ಳಲಾಗುತ್ತಿದೆ. ಈ ಸಂದೇಶದಲ್ಲಿ ಬಹುಮಾನದ ಆಸೆ ತೋರಿಸಿ ಲಿಂಕ್ ಕ್ಲಿಕ್ ಮಾಡುವಂತೆ ಹಾಗೂ ಇತರರಿಗೂ ಹಂಚಿಕೊಳ್ಳುವಂತೆ ಪ್ರೇರೇಪಿಸಲಾಗುತ್ತಿದೆ.ಆದರೆ, ಸಂದೇಶದಲ್ಲಿರುವ ಲಿಂಕ್ ಏರ್‌ಟೆಲ್‌ನ ಅಧಿಕೃತ ವೆಬ್‌ಸೈಟ್‌ಗೆ ಸೇರಿದ್ದಲ್ಲ. ಛಟಜ್ಞುತ.ಛಣದದ ಎಂಬ ಅಪರಿಚಿತ ಡೊಮೇನ್ ಮೂಲಕ ಹರಿದಾಡುತ್ತಿರುವ ಈ ಲಿಂಕ್ ಫಿಶಿಂಗ್ ವಂಚನೆಯ ಭಾಗವಾಗಿರುವ ಸಾಧ್ಯತೆ ಇದೆ. ಲಿಂಕ್ ತೆರೆದಾಗ ವೈಯಕ್ತಿಕ ಮಾಹಿತಿ, ಬ್ಯಾಂಕ್ ಖಾತೆ ವಿವರ, ಒಟಿಪಿ ಅಥವಾ ಯುಪಿಐ ಪಿನ್ ಪಡೆದು ಹಣ ಲಪಟಾಯಿಸುವ ಅಪಾಯವಿದೆ. ಏರ್‌ಟೆಲ್ ಹೆಸರಿನಲ್ಲಿ ಬರುವ ಇಂತಹ ಆಮಿಷದ ಸಂದೇಶಗಳನ್ನು ನಂಬಬಾರದು. ಅಪರಿಚಿತ ಲಿಂಕ್‌ಗಳನ್ನು ಕ್ಲಿಕ್ ಮಾಡಬಾರದು. ಯಾವುದೇ ಕಾರಣಕ್ಕೂ ಒಟಿಪಿ, ಬ್ಯಾಂಕ್ ವಿವರ ಅಥವಾ ಯುಪಿಐ ಪಿನ್ ಹಂಚಿಕೊಳ್ಳ

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ

ತಾಲ್ಲೂಕು ಮಟ್ಟದ ಕಾರ್ಯಪಡೆ ಸಮಿತಿ ಸಭೆ ಪ್ರತಿ ತಿಂಗಳು ಕಡ್ಡಾಯವಾಗಿ ನಡೆಯಬೇಕು

ಪಾಂಡವ ನ್ಯೂಸ್, ಚಿತ್ರದುರ್ಗ : ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮತ್ತು ಮಕ್ಕಳ ಸಂರಕ್ಷಣೆಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದ ಕಾರ್ಯಪಡೆ ಸಭೆಗಳನ್ನು ಕಡ್ಡಾಯವಾಗಿ ಪ್ರತಿ ತಿಂಗಳು ನಡೆಸಿ, ಪ್ರಗತಿ ಪರಿಶೀಲನೆ ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾಮಟ್ಟದ ಕಾರ್ಯಪಡೆ ಮತ್ತು ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಕಂದಾಯ, ಪೊಲೀಸ್, ಸಮಾಜ ಕಲ್ಯಾಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ ಅಧಿಕಾರಿಗಳನ್ನೊಳಗೊಂಡ ಕಾರ್ಯಪಡೆ ಸಭೆಗಳು ಪ್ರತಿ ತಿಂಗಳು ಕಡ್ಡಾಯವಾಗಿ ನಡೆಯಬೇಕು. ಆದರೆ ಕೆಲವು ತಾಲ್ಲೂಕುಗಳಲ್ಲಿ ಕಳೆದ ಎಂಟು ತಿಂಗಳುಗಳಿಂದ ಎರಡು-ಮೂರು ಸಭೆಗಳನ್ನು ಮಾತ್ರ ನಡೆಸಲಾಗಿದೆ. ನಿಯಮಿತವಾಗಿ ಸಭೆ ನಡೆಸದ ಕಾರ್ಮಿ ನಿರೀಕ್ಷಕರ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲಾಗುವುದು ಎಚ್ಚರಿಕೆ ನೀಡಿದರು.

ಹೋಟೆಲ್, ಡಾಬಾ, ಗ್ಯಾರೇಜ್, ವರ್ಕ್‌ಶಾಪ್, ಕಟ್ಟಡ ನಿರ್ಮಾಣ ಸ್ಥಳಗಳು ಹಾಗೂ ಬೇಕರಿಗಳಿಗೆ ನಿರಂತರವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಬಾಲಕಾರ್ಮಿಕರು ಕಂಡುಬಂದರೆ ತಕ್ಷಣವೇ ಅವರನ್ನು ರಕ್ಷಿಸಿ, ಪುನರ್ವಸತಿ ಕಲ್ಪಿಸಬೇಕು. ನಿಯಮ ಉಲ್ಲಂಘಿಸುವ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಬೇಕು ಎಂದು ನಿರ್ದೇಶನ ನೀಡಿದರು.

ಕಾರ್ಮಿಕ ಅಧಿಕಾರಿ ಎಸ್.ಆರ್.ಅರವಿಂದ ಮಾತನಾಡಿ, ಇತ್ತೀಚೆಗೆ ಜಿಲ್ಲೆಯ ವಿವಿಧ ಅಂಗಡಿ,



ವಾಣಿಜ್ಯ ಸಂಸ್ಥೆಗಳು, ಗ್ಯಾರೇಜ್ ಹಾಗೂ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಾಲಕಾರ್ಮಿಕ ಕಾಯ್ದೆ 1986ರ ಕಲಂ 16 ಮತ್ತು 17ರ ಅಡಿಯಲ್ಲಿ ಮಾಸಿಕ ಕನಿಷ್ಠ 15 ತಪಾಸಣೆಗಳನ್ನು ನಡೆಸಲಾಗಿದೆ. ಈ ತಪಾಸಣೆಗಳ ಸಂದರ್ಭದಲ್ಲಿ ಒಟ್ಟು 20 ಮಕ್ಕಳನ್ನು ಗುರುತಿಸಿ, ರಕ್ಷಿಸಲಾಗಿದೆ. ರಕ್ಷಿಸಲ್ಪಟ್ಟವರಲ್ಲಿ 16 ಕಿಶೋರ ಕಾರ್ಮಿಕರು ಹಾಗೂ 4 ಬಾಲಕಾರ್ಮಿಕರಿದ್ದಾರೆ ಎಂದು ಮಾಹಿತಿ ನೀಡಿದರು.

ರಕ್ಷಣೆ ಮಾಡಿದ ನಂತರ ಮಕ್ಕಳನ್ನು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು ಮಾತ್ರ ಪುನರ್ವಸತಿಯಲ್ಲ. ಮಕ್ಕಳು ಶಾಲೆಗೆ ತೆರಳುತ್ತಿದ್ದಾರೆಯೇ, ಕುಟುಂಬದ ಆರ್ಥಿಕ ಸ್ಥಿತಿ ಹೇಗಿದೆ ಎಂಬುದನ್ನು ಪರಿಶೀಲಿಸಬೇಕು. ಮಕ್ಕಳ ಮನೆಗೆ ಭೇಟಿ ನೀಡಿ ಸಂಪೂರ್ಣ ಮಾಹಿತಿ ಪಡೆಯಬೇಕು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚಿಸಿದರು.

ತಪಾಸಣೆ ವೇಳೆ ಹೊರರಾಜ್ಯದ ಮಕ್ಕಳಿದ್ದಲ್ಲಿ, ಅವರು ಪೋಷಕರ ಜೊತೆಗಿದ್ದರೆ ಸೂಕ್ತ ತನಿಖೆ ನಡೆಸಿ ದಾಖಲಿಸಿಕೊಳ್ಳಬೇಕು. ನಮ್ಮ ಜಿಲ್ಲೆಯ ಮಕ್ಕಳಾಗಿದ್ದಲ್ಲಿ ಅವರಿಗೆ ವಸತಿ ಶಾಲೆಗಳಾದ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ವಸತಿ ಶಾಲೆಗಳಲ್ಲಿ ಶೇ.10ರಷ್ಟು ಮೀಸಲಾತಿಯಡಿ ಉಚಿತ ಪ್ರವೇಶ ಕೊಡಿಸಲು ಪೋಷಕರ ಒಪ್ಪಿಗೆ ಪಡೆದು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂದು ತಾಕೀತು ಮಾಡಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಪ್ರತಿ 15 ದಿನಗಳಿಗೊಮ್ಮೆ ಎಲ್ಲ ಕಾರ್ಮಿಕ ನಿರೀಕ್ಷಕರೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಬೇಕು. ಅಗತ್ಯಬಿದ್ದರೆ ಗೂಗಲ್ ಮೀಟ್ ಮೂಲಕ ಸಭೆ ನಡೆಸಿ, ಯಾವ ತಾಲೂಕಿನಲ್ಲಿ ಎಷ್ಟು ದಾಳಿಗಳಾಗಿವೆ ಮತ್ತು ಎಷ್ಟು ಪ್ರಕರಣಗಳು ದಾಖಲಾಗಿವೆ ಎಂಬ ವರದಿ ಪಡೆಯಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ ತೋರಿದರೆ ಅಧಿಕಾರಿಗಳ ವಿರುದ್ಧವೇ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಶಾಲೆಯಿಂದ ಸತತ 15 ದಿನಗಳ ಕಾಲ ಗೈರುಹಾಜರಾಗುವ ಅಥವಾ ಶಾಲೆ ಬಿಟ್ಟ ಮಕ್ಕಳ ಬಗ್ಗೆ ಶಿಕ್ಷಣ ಇಲಾಖೆ ಅಧಿಕಾರಿಗಳು ಎಚ್ಚರ ವಹಿಸಬೇಕು. ಇಂತಹ ಮಕ್ಕಳು ಬಾಲಕಾರ್ಮಿಕ ಪದ್ಧತಿ, ಬಾಲ್ಯವಿವಾಹಕ್ಕೆ ತುತ್ತಾಗುವ ಸಾಧ್ಯತೆಗಳು ಹೆಚ್ಚಿರುತ್ತವೆ. ಇದನ್ನು ತಡೆಯುವ ನಿಟ್ಟಿನಲ್ಲಿ ತಾಲೂಕು ಮಟ್ಟದಲ್ಲಿ ತಹಶೀಲ್ದಾರ್, ಬಿಇಒ, ಸಿಡಿಪಿಒ, ಪೊಲೀಸ್ ಇಲಾಖೆ ಹಾಗೂ ಕಾರ್ಮಿಕ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಬೇಕು ಎಂದರು.

ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ ಹಾಗೂ ಅಪ್ರಾಪ್ತರ ಗರ್ಭಧಾರಣೆಯಂತಹ ಪ್ರಕರಣಗಳು ಸಮಾಜಕ್ಕೆ ಕಳಂಕವಾಗಿದ್ದು, ಇವುಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ಎಲ್ಲ ಇಲಾಖೆಗಳು ಬದ್ಧತೆಯಿಂದ, ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು.

ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನಜಾಗೃತಿ ಮೂಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಬಾಲಕಾರ್ಮಿಕತೆ ನಿರ್ಮೂಲನೆ, ಮಕ್ಕಳ ಸಹಾಯವಾಣಿ, ಮಕ್ಕಳ ಮಾರಾಟ ಶಿಕ್ಷಾರ್ಹ ಅಪರಾಧ ಹಾಗೂ ಮಕ್ಕಳ ದತ್ತು ಮಾರ್ಗಸೂಚಿ ಕರಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ಜಯಲಕ್ಷ್ಮಮ್ಮ, ಕಾರ್ಮಿಕ ಅಧಿಕಾರಿ ಎಸ್. ಆರ್.ಅರವಿಂದ್, ಮಹಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವಿಜಯಕುಮಾರ್, ಜಿಲ್ಲಾ ವಾರ್ತಾಧಿಕಾರಿ ಎಂ.ಜುಂಜಣ್ಣ, ಕಾರ್ಮಿಕ ನಿರೀಕ್ಷಕರಾದ ರಾಜಣ್ಣ, ಅಲ್ಲಾ ಭಕ್ಷಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಂ.ವಿ.ವೀಣಾ, ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಎಸ್‌ಸಿ, ಎಸ್‌ಟಿ ನವ ಉದ್ಯಮಿಗಳಿಗೆ ನ.17ರಂದು ಉದ್ಯಮಶೀಲತಾ ಶಿಬಿರ

ಸರ್ಕಾರದ ಯೋಜನೆ, ಶೇ.4 ಮೀಸಲಾತಿ ಸೌಲಭ್ಯದ ಕುರಿತು ಅರಿವು

ಪಾಂಡವ ನ್ಯೂಸ್, ಬಳ್ಳಾರಿ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ಯಮಿಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒದಗಿಸಿರುವ ವಿವಿಧ ಸೌಲಭ್ಯಗಳು ಮತ್ತು ಶೇ.4ರಷ್ಟು ಮೀಸಲಾತಿಯ ಪ್ರಯೋಜನಗಳನ್ನು ಸಮರ್ಪಕವಾಗಿ ತಲುಪಿಸುವ ಉದ್ದೇಶದಿಂದ ಮೈಸೂರು ಆಟೋಮೋಟಿವ್ ಚೇಂಬರ್ಸ್ ಸಂಸ್ಥೆಯ ವತಿಯಿಂದ ನ.17ರಂದು ನಗರದಲ್ಲಿ ಒಂದು ದಿನದ ಉದ್ಯಮಶೀಲತಾ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಆರ್. ಮಂಜುನಾಥ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 10 ಗಂಟೆಗೆ ಗಾಂಧಿನಗರದ ಮೋಕಾ ರಸ್ತೆಯಲ್ಲಿರುವ ನಕ್ಷತ್ರ ಹೋಟೆಲ್ ಸಭಾಂಗಣದಲ್ಲಿ ಕಾರ್ಯಾಗಾರ ನಡೆಯಲಿದೆ. ರಾಷ್ಟ್ರೀಯ ಎಸ್‌ಸಿ/ಎಸ್‌ಟಿ ಹಬ್, ಎಂಎಸ್‌ಎಂಇ, ಜಿಲ್ಲಾ ಕೈಗಾರಿಕಾ ಕೇಂದ್ರ (ಡಿಐಸಿ), ಪವರ್‌ಗ್ರಿಡ್, ಎನ್‌ಎಂಡಿಸಿ, ಎಫ್‌ಸಿಐ ಹಾಗೂ ಕೆಎಸ್‌ಎಫ್‌ಸಿ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ತಜ್ಞ ಅಧಿಕಾರಿಗಳಿಂದ ಮಾಹಿತಿ ನೀಡಲಾಗುವುದು ಎಂದರು.

ಈಗಾಗಲೇ ಉದ್ಯಮ ನಡೆಸುತ್ತಿರುವವರು ಹಾಗೂ ಹೊಸದಾಗಿ ಉದ್ಯಮ ಆರಂಭಿಸಲು ಆಸಕ್ತಿ ಹೊಂದಿರುವ ಯುವಕ-ಯುವತಿಯರಿಗೆ ಉದ್ಯಮಶೀಲತೆಯ ಕುರಿತು ಪ್ರಾಯೋಗಿಕ ಮಾಹಿತಿ ನೀಡುವುದು ಕಾರ್ಯಾಗಾರದ ಉದ್ದೇಶವಾಗಿದೆ. ಡಿಜಿಟಲ್ ಮಾರ್ಕೆಟಿಂಗ್, ಸಾಮಾಜಿಕ ಜಾಲತಾಣಗಳ ಬಳಕೆ, ವಾಟ್ಸ್‌ಪ್, ಫೇಸ್‌ಬುಕ್ ಹಾಗೂ ಸರ್ಕಾರಿ ಖರೀದಿ ಪ್ರಕ್ರಿಯೆಯಲ್ಲಿ ಪ್ರಮುಖವಾಗಿರುವ ಜಿಇಎಂ (GeM) ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳುವ ವಿಧಾನದ ಬಗ್ಗೆ ತಜ್ಞರು ತಿಳಿಸಿಕೊಡಲಿದ್ದಾರೆ.

ಕೇಂದ್ರ ಸರ್ಕಾರದ ಖರೀದಿ ನೀತಿಯಡಿ ಎಸ್‌ಸಿ, ಎಸ್‌ಟಿ ಉದ್ಯಮಿಗಳಿಗೆ ಲಭ್ಯವಿರುವ ಶೇ.4ರಷ್ಟು ಮೀಸಲಾತಿ ಸೌಲಭ್ಯವನ್ನು ಪಡೆದುಕೊಳ್ಳುವ ವಿಧಾನ, ವಿವಿಧ ಸರ್ಕಾರಿ ಯೋಜನೆಗಳು, ಸಾಲ ಸೌಲಭ್ಯ ಹಾಗೂ ಉದ್ಯಮ ಅಭಿವೃದ್ಧಿಗೆ ಇರುವ ಅವಕಾಶಗಳ ಬಗ್ಗೆಯೂ ಮಾಹಿತಿ ನೀಡಲಾಗುವುದು ಎಂದು ಹೇಳಿದರು.

'ಸಮಗ್ರ ಕರ್ನಾಟಕ, ಸಮೃದ್ಧ ಕರ್ನಾಟಕ' ಪರಿಕಲ್ಪನೆಯಡಿ ಯುವಕರು ಹಾಗೂ ಮಹಿಳೆಯರನ್ನು ಉದ್ಯಮಶೀಲತೆಯತ್ತ ಪ್ರೇರೇಪಿಸಿ, ಉದ್ಯೋಗ ಸೃಷ್ಟಿಗೆ ಉತ್ತೇಜನ ನೀಡುವುದು ಸಂಸ್ಥೆಯ ಆಶಯವಾಗಿದೆ. ಉದ್ಯಮಾಸಕ್ತರು ಸರ್ಕಾರದ ಯೋಜನೆಗಳ ಪ್ರಯೋಜನ ಪಡೆದು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಕೈಗಾರಿಕಾ ಕ್ಷೇತ್ರದಲ್ಲಿ ಹೊಸ ಉದ್ಯಮಿಗಳಿಗೆ ಸೂಕ್ತ



ಮಾರ್ಗದರ್ಶನ ನೀಡುವ ಉದ್ದೇಶದಿಂದ ಈ ಕಾರ್ಯಾಗಾರ ಆಯೋಜಿಸಲಾಗಿದೆ ಎಂದರು.

ಒಂದೇ ವೇದಿಕೆಯಲ್ಲಿ ವಿವಿಧ ಕೈಗಾರಿಕಾ ವಲಯಗಳು, ಹಣಕಾಸು ಸಂಸ್ಥೆಗಳು ಹಾಗೂ ಸರ್ಕಾರಿ ಇಲಾಖೆಗಳ ಮಾಹಿತಿ ಮತ್ತು ಪ್ರದರ್ಶನ ವ್ಯವಸ್ಥೆ ಕಲ್ಪಿಸಲಾಗುವುದು. ಆಸಕ್ತರು ಸ್ಥಳದಲ್ಲಿಯೇ ನೋಂದಣಿ ಮಾಡಿಕೊಂಡು ಅಧಿಕಾರಿಗಳಿಂದ ನೇರ ಮಾಹಿತಿ ಪಡೆಯಬಹುದು. ಕಾರ್ಯಾಗಾರದ ನಂತರವೂ ನವೋದ್ಯಮಿಗಳಿಗೆ ನಿರಂತರ ಮಾರ್ಗದರ್ಶನ ಮತ್ತು ಸಂಪರ್ಕ ಸೇತುವೆಯಾಗಿ ಸಂಸ್ಥೆ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಜೋಳದರಾಶಿ ತಿಮ್ಮಪ್ಪ, ರಾಮಕೃಷ್ಣ, ಎಸ್. ಮಂಜುನಾಥ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನ.11 ರಂದು ಜಿಲ್ಲಾಡಳಿತದಿಂದ ಒನಕೆ ಓಬವ್ವ ಜಯಂತಿ ಅರ್ಥಪೂರ್ಣ ಆಚರಣೆ

ಪಾಂಡವ ನ್ಯೂಸ್, ಬಳ್ಳಾರಿ : ನಾಡಿನ ಸ್ವಾಭಿಮಾನ, ಅಪ್ರತಿಮ ಸಾಹಸ ಹಾಗೂ ದೇಶಭಕ್ತಿಯ ಸಂಕೇತವಾಗಿರುವ ವೀರವನಿತೆ ಒನಕೆ ಓಬವ್ವ ಅವರ ಜಯಂತಿಯನ್ನು ನ.11 ರಂದು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತರ ಕಚೇರಿಯ ತಹಶೀಲ್ದಾರ ಶೇಕ್ಷಾವಲಿ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಒನಕೆ ಓಬವ್ವ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು,

ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಒನಕೆ ಓಬವ್ವ ಯಾವುದೇ ಒಂದು ನಿರ್ದಿಷ್ಟ ಸಮುದಾಯಕ್ಕೆ ಸೀಮಿತರಲ್ಲ, ಅವರು ಇಡೀ ದೇಶವೇ ಹೆಮ್ಮೆಪಡುವಂತಹ ವೀರನಾರಿ. ಅವರ ಜಯಂತಿಯನ್ನು ಕೇವಲ ಸರ್ಕಾರಿ ಕಾರ್ಯಕ್ರಮವನ್ನಾಗಿ ಮಾತ್ರವಲ್ಲದೆ ಸಾರ್ವಜನಿಕರೆಲ್ಲರೂ ಸ್ವಯಂಪ್ರೇರಿತರಾಗಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ, ಗಣ್ಯರನ್ನು ಆಹ್ವಾನಿಸಬೇಕು. ಒನಕೆ ಓಬವ್ವ ಅವರ ಶೌರ್ಯ, ತ್ಯಾಗ ಮತ್ತು ಸ್ವಾಭಿಮಾನದ ಬದುಕಿನ ಕುರಿತು ವಿಶೇಷ ಉಪನ್ಯಾಸ ನೀಡಲು ನುರಿತ ಉಪನ್ಯಾಸಕರನ್ನು ನಿಯೋಜಿಸಬೇಕು. ಕಾರ್ಯಕ್ರಮದಲ್ಲಿ ಸುಗಮ ಸಂಗೀತ ಇರಲಿದೆ ಎಂದರು.

ವೇದಿಕೆ ಕಾರ್ಯಕ್ರಮದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಕೈಗೊಳ್ಳುವಂತೆ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದ ಅವರು, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಭಾಗವಹಿಸುವಂತೆ ಡಿಡಿಪಿಯು ಅಧಿಕಾರಿಗಳು ಕ್ರಮವಹಿಸಬೇಕು ಎಂದು ತಿಳಿಸಿದರು.

ಇದೇ ವೇಳೆ ಸಮುದಾಯದ ಮುಖಂಡರು ಭಾಗವಹಿಸಿ ತಮ್ಮ ಸಲಹೆ ನೀಡಿದರು.


ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು, ಇತರರು ಉಪಸ್ಥಿತರಿದ್ದರು.

ಬಂಜಾರಾ ಕಲಾವಿದರಿಂದ ಅರ್ಜಿ ಆಹ್ವಾನ

ಪಾಂಡವ ನ್ಯೂಸ್, ಹುಬ್ಬಳ್ಳಿ : 2026-27ನೇ ಸಾಲಿನಲ್ಲಿ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತ ಧಾರವಾಡ ವಲಯ ವ್ಯಾಪ್ತಿಯ ಧಾರವಾಡ, ಬೆಳಗಾವಿ ಹಾಗೂ ಉತ್ತರ ಕನ್ನಡ ಜಿಲ್ಲೆಯ ಬಂಜಾರ ಸಮುದಾಯದ ಸಾಂಪ್ರದಾಯಿಕ ಬಂಜಾರರ ಸಂಸ್ಕೃತಿ ಮತ್ತು ಕಲೆಗಳನ್ನು ಉಳಿಸಿ-ಬೆಳೆಸಿ, ಪುನಶ್ಚೇತನಗೊಳಿಸುವ ಉದ್ದೇಶದಿಂದ ಮತ್ತು ಬಂಜಾರ ಕಲಾವಿದರ ಪ್ರತಿಭೆಯನ್ನು ಹೊರಹೊಮ್ಮಿಸಲು ಬಂಜಾರರ ಬಹುಮುಖಿ ಕಲಾ ಪ್ರತಿಭಾನ್ವೇಷಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಬಂಜಾರ ಸಮುದಾಯದ ಬಹುಮುಖಿ ಕಲಾ ಪ್ರಕಾರಗಳಾದ ವಾಜಾವಾದ್ಯ ಕಲೆ, ಮಹಿಳೆಯರ ಸಾಂಪ್ರದಾಯಕ ಗಾಯನ ಮತ್ತು ನೃತ್ಯ, ಬಂಜಾರರ ಜಾನಪದ ನೃತ್ಯ, ಬಂಜಾರಾ ಯುವತಿಯ ರಫೂಮರ್ ನೃತ್ಯ, ಪುರುಷರ ಲೇಂಗಿ ನೃತ್ಯ, ನಂಗಾರ ಠೋಳಿಬಿಡಿಸುವ ನೃತ್ಯ, ಕಥನಗಾಯನ, ಬಂಜಾರ ಮಹಿಳೆಯರ ಸಾಂಪ್ರದಾಯಕ ಗಾಯನ (ವಳಂಗ, ಮೇಹಂದಿ, ಡೋರಣ್&ಆರತಿ ಗೀತೆ), ಬಂಜಾರರ ಸುಗಮ ಸಂಗೀತ (ಭಕ್ತಿಗೀತೆ, ಭಾವಗೀತೆ&ಜಾನಪದ ಗೀತೆ), ಬಂಜಾರ ಬಾಲಕರ ಬಂಜಾರ ಬಾಲಕಿಯರ ಕಲಾ ನೃತ್ಯ, ಬಂಜಾರಾ ಢಾವಲೋ ಮತ್ತು ಹವೇಲಿ (ಮದುವೆ ಶಾಸ್ತ್ರ), ಬಂಜಾರಾರ ಪುರುಷರ ಸಾಂಪ್ರದಾಯಿಕ ಕಡಿ ಕಸಳಾತ್ ಮರಣ ಸಿಕವಾಡಿ, ಗೋಳ ಖಾಯರ್‌ಕಡಿ, ಪಾನೇರ್ ಭಾಂಗ್‌ಖ್ಯೇಮ್ ಅನೇಕ ಪ್ರಕಾರಗಳಲ್ಲಿ ಬಂಜಾರ ಸಮುದಾಯದ ಕಲಾವಿದರು ಭಾಗವಹಿಸಿ, ತಮ್ಮಲ್ಲಿ ಹುದುಗಿರುವ ಕಲಾ ಪ್ರತಿಭೆಯನ್ನು ಪೂರೈಸಿ ಪ್ರಶಸ್ತಿ ಪಡೆಯಲು 2026-27ನೇ ಸಾಲಿನಲ್ಲಿ ಅವಕಾಶವನ್ನು ಕಲ್ಪಿಸುವ ಉದ್ದೇಶದಿಂದ ಅರ್ಹ ಮತ್ತು ಆಸಕ್ತ ಬಂಜಾರ ಕಲಾವಿದರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗಧಿತ ಅರ್ಜಿ ನಮೂನೆ ಭರ್ತಿ ಮಾಡಿ ನವೆಂಬರ್ 20 ರೊಳಗಾಗಿ ಧಾರವಾಡ ಜಿಲ್ಲಾ ಬಂಜಾರ ಭವನ, ಇ.ಪಿ.ಎಫ್. ಕಛೇರಿ ಪಕ್ಕ, ನವನಗರ, ಹುಬ್ಬಳ್ಳಿ-580025 ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗ ದೂರವಾಣಿ ಸಂಖ್ಯೆ 9945211221, 9008259228, 9606309713 ಸಂಪರ್ಕಿಸಬಹುದು ಎಂದು ಧಾರವಾಡ ವಲಯದ ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪುರಸಭೆ ಕಾರ್ಯಾಲಯ, ಹಾನಗಲ್ಲ

ನಂ.:



ಆರು ಖ್ಯಾತ ನಿರ್ದೇಶಕರ ಸಾಥ್ : 'ನೀ ನಂಗೆ ಅಲ್ಲವಾ' ಟ್ರೇಲರ್‌ಗೆ ಮೆಚ್ಚುಗೆ : ನವೆಂಬರ್ 13ರಂದು ರಾಜ್ಯಾದ್ಯಂತ ತೆರೆಗೆ



ಕನ್ನಡ ಚಿತ್ರರಂಗದ ಆರು ಖ್ಯಾತ ನಿರ್ದೇಶಕರ ಉಪಸ್ಥಿತಿ ಹಾಗೂ ಮೆಚ್ಚುಗೆಯೊಂದಿಗೆ 'ನೀ ನಂಗೆ ಅಲ್ಲವಾ' ಚಿತ್ರದ ಟ್ರೇಲರ್ ಅನಾವರಣಗೊಂಡಿದೆ. ವಿಭಿನ್ನ ಕಥಾ-ಹಂದರದ ನಿರೀಕ್ಷೆ ಮೂಡಿಸಿರುವ ಈ ಚಿತ್ರಕ್ಕೆ ನಿರ್ದೇಶಕರಿಂದ ದೊರೆತ ಪ್ರೋತ್ಸಾಹ ಚಿತ್ರತಂಡದ ಆತ್ಮವಿಶ್ವಾಸವನ್ನು ಹೆಚ್ಚಿಸಿದೆ.

ಜಯರಾಮ್ ದೇವಸಮುದ್ರ ನಿರ್ಮಾಣದಲ್ಲಿ, ಮನೋಜ್ ಪಿ. ನಡಲಮನೆ ನಿರ್ದೇಶನದ ಈ ಚಿತ್ರದ ಟ್ರೇಲರ್ ಅನ್ನು ಶಶಾಂಕ್, ಪವನ್ ಒಡೆಯರ್, ಬಹದ್ದೂರ್ ಚೇತನ್, ಮಹೇಶ್ ಕುಮಾರ್, ರೋಹಿತ್ ಪದಕಿ ಹಾಗೂ ಗುರುದತ್ ಗಾಣಿಗ ಬಿಡುಗಡೆ ಮಾಡಿದರು. 'ಪ್ರೇಮದ ಊರಲಿ' ಚಿತ್ರದ ನಿರ್ಮಾಪಕ ದೇವೇಂದ್ರ ಕೂಡ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಟ್ರೇಲರ್ ವೀಕ್ಷಿಸಿದ ನಿರ್ದೇಶಕರು ಕಥೆ, ನಿರೂಪಣೆ, ಸಂಗೀತ ಹಾಗೂ ಛಾಯಾಗ್ರಹಣದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಚಿತ್ರ ಯಶಸ್ಸು ಕಾಣಲಿ ಎಂದು ಹಾರೈಸಿದರು.

ಹೊಸ ಪ್ರತಿಭೆಗಳ ಕನಸುಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಚಿತ್ರ ನಿರ್ಮಿಸಿರುವುದಾಗಿ ನಿರ್ಮಾಪಕ ಜಯರಾಮ್ ದೇವಸಮುದ್ರ ತಿಳಿಸಿದರು. ಚಿತ್ರರಂಗದ ಗಣ್ಯರಿಂದ ದೊರೆತ ಬೆಂಬಲಕ್ಕೆ ಕೃತಜ್ಞತೆ ಸಲ್ಲಿಸಿದರು. ನಿರ್ದೇಶಕ ಮನೋಜ್ ಪಿ. ನಡಲಮನೆ ಮಾತನಾಡಿ, ತಂಡ ಪ್ರಾಮಾಣಿಕವಾಗಿ ಶ್ರಮಿಸಿದ್ದು, ಟ್ರೇಲರ್ ಇಷ್ಟವಾದಲ್ಲಿ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುವ ಮೂಲಕ ಪ್ರೋತ್ಸಾಹಿಸುವಂತೆ ಮನವಿ ಮಾಡಿದರು.

ನಾಯಕ ರಾಹುಲ್ ಆರ್ಕಾಟ್‌ಗೆ ಇದು ಮೊದಲ ಚಿತ್ರ. ಸುಮಾರು ಮೂರೂವರೆ ವರ್ಷಗಳ ಪಯಣದಲ್ಲಿ ಹಲವು ಸವಾಲುಗಳನ್ನು ಎದುರಿಸಿ ಸಿನಿಮಾ ಪೂರ್ಣಗೊಳಿಸಿರುವುದಾಗಿ ಅವರು ತಿಳಿಸಿ, ಸಹಕರಿಸಿದ ಎಲ್ಲರಿಗೂ ಧನ್ಯವಾದ ಅರ್ಪಿಸಿದರು.ನಾಯಕಿ

ಕಾಶಿಮಾ, 'ಖುಷಿ' ಪಾತ್ರದಲ್ಲಿ ನಗು, ಅಳು, ನೋವು, ಸಂತೋಷ ಸೇರಿದಂತೆ ಹಲವು ಭಾವನೆಗಳನ್ನು ವ್ಯಕ್ತಪಡಿಸುವ ಅವಕಾಶ ಸಿಕ್ಕಿದೆ ಎಂದರು. ಮಹಿಳೆಯರು ಎದುರಿಸುವ ದೈಹಿಕ, ಮಾನಸಿಕ ಹಾಗೂ ಭಾವನಾತ್ಮಕ ಸವಾಲುಗಳನ್ನು ಚಿತ್ರದಲ್ಲಿ ನೈಜವಾಗಿ ಚಿತ್ರಿಸಲಾಗಿದೆ ಎಂದು ಹೇಳಿದರು. ನಾಯಕನ ತಂದೆಯ ಪಾತ್ರದಲ್ಲಿ ನಟಿಸಿರುವ ಮಂಜುನಾಥ ಹೆಗಡೆ ನಿರ್ದೇಶಕರ ಕಾರ್ಯವೈಖರಿಯನ್ನು ಶ್ಲಾಘಿಸಿದರು.

ಸಂಗೀತ ನಿರ್ದೇಶಕ ಸೂರಜ್ ದೇಸಾಯಿ, ಛಾಯಾಗ್ರಾಹಕ ಉದಯ್ ಲೀಲಾ ಹಾಗೂ ಸೌಂಡ್ ಎಂಜಿನಿಯರ್ ನವೀನ್ ಕುಮಾರ್ ತಮ್ಮ ಅನುಭವ ಹಂಚಿಕೊಂಡರು.

ಚಿತ್ರ ನವೆಂಬರ್ 13ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ.

ಚಿತ್ರದ ಕಥಾವಸ್ತು ಚರ್ಚೆ ಹುಟ್ಟುಹಾಕುವುದು ಆರೋಗ್ಯಕರ ಚಿತ್ರರಂಗದ ಲಕ್ಷಣ": ನಟ ಜಗ್ಗೇಶ್



ಬೆಂಗಳೂರು: ಯಾವುದೇ ಒಂದು ಸಿನಿಮಾದ ಕಥಾವಸ್ತು ಸಮಾಜದಲ್ಲಿ ಚರ್ಚೆ ಮತ್ತು ಸಂವಾದಗಳನ್ನು ಹುಟ್ಟುಹಾಕಿದರೆ, ಅದು ಆರೋಗ್ಯಕರ ಚಿತ್ರರಂಗದ ಲಕ್ಷಣವನ್ನು ತೋರಿಸುತ್ತದೆ ಎಂದು ಹಿರಿಯ ನಟ ಜಗ್ಗೇಶ್ ಅವರು ಹೇಳಿದ್ದಾರೆ.

'ಸಂಗೀತಾ ಬಾರ್ ಅಂಡ್ ರೆಸ್ಟೋರೆಂಟ್' ಚಿತ್ರದ ಟೀಸರ್ ಬಿಡುಗಡೆ ಸಮಾರಂಭದಲ್ಲಿ ಹಿರಿಯ ನಟ ಹಾಗೂ ರಾಜ್ಯಸಭಾ ಸದಸ್ಯ ಜಗ್ಗೇಶ್ ಚಿತ್ರತಂಡದ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಚಿತ್ರದಲ್ಲಿ ಕೋಮಲ್ ಕುಮಾರ್, ಮೇಘನಾ ರಾಜ್ ಹಾಗೂ ಅನುಷಾ ರೈ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಬಾರ್ ಹಿನ್ನೆಲೆಯನ್ನು ಸೂಚಿಸುವ ಚಿತ್ರದ ಶೀರ್ಷಿಕೆ ಕುತೂಹಲ ಮೂಡಿಸಿದ್ದರೆ, ಟೀಸರ್‌ನಲ್ಲಿ ಲವ್ ಜಿಹಾದ್, ಧಾರ್ಮಿಕ ಮತಾಂತರ, ದೇವಸ್ಥಾನಗಳ ಮೇಲಿನ ದಾಳಿ ಹಾಗೂ ಅಂತರ್‌ಧರ್ಮೀಯ ಸಂಘರ್ಷದಂತಹ ರಾಜಕೀಯ ಮತ್ತು ಸಾಂಸ್ಕೃತಿಕ ಸೂಕ್ಷ್ಮ ವಿಷಯಗಳನ್ನು ಪ್ರಸ್ತಾಪಿಸಲಾಗಿದೆ.

ಹೀಗಾಗಿ ಚಿತ್ರದ ವಿಚಿತ್ರ ಶೀರ್ಷಿಕೆಗೂ ಕಥೆಗೂ ಇರುವ ಸಂಬಂಧವೇನು ಎಂಬ ಕುತೂಹಲ ಪ್ರೇಕ್ಷಕರಲ್ಲಿ ಮೂಡಿದೆ.

ಈ ಕುತೂಹಲಕ್ಕೆ ಉತ್ತರ ನೀಡಿದ ನಿರ್ದೇಶಕ ಸಂದೇಶ್ ಅವರು, ಚಿತ್ರವು ಎರಡು ವಿಭಿನ್ನ ಕಾಲಘಟ್ಟಗಳಲ್ಲಿ ಸಾಗುತ್ತದೆ ಎಂದು ವಿವರಿಸಿದರು.

ಚಿತ್ರದ ಮೊದಲಾರ್ಧ ಬಾರ್‌ನಲ್ಲಿ ಆರಂಭವಾಗಿ ಅಲ್ಲಿಯೇ ಸಂಪೂರ್ಣವಾಗಿ ಬೆಳವಣಿಗೆ ಹೊಂದುತ್ತದೆ. ಆದರೆ, ದ್ವಿತೀಯಾರ್ಧ ಸಂಪೂರ್ಣವಾಗಿ ಆಧ್ಯಾತ್ಮಿಕ ತಾಣವಾದ 'ದೇವರ ತಾಣ'ಕ್ಕೆ ಸ್ಥಳಾಂತರಗೊಳ್ಳುತ್ತದೆ. ಪರಿಕಲ್ಪನೆಯ ದೃಷ್ಟಿಯಿಂದ ಈ ಒಂದೇ ಚಿತ್ರಕ್ಕೆ ಎರಡು ವಿಭಿನ್ನ ಶೀರ್ಷಿಕೆಗಳಿವೆ. ಮೊದಲಾರ್ಧಕ್ಕೆ 'ಸಂಗೀತಾ ಬಾರ್ ಅಂಡ್ ರೆಸ್ಟೋರೆಂಟ್' ಹಾಗೂ ನಂತರದ ಭಾಗಕ್ಕೆ 'ದೇವರ ತಾಣ' ಎಂಬ ಹೆಸರಿದೆ. ಆದರೆ, ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡಲು ಒಂದೇ ಶೀರ್ಷಿಕೆಯನ್ನು ನೋಂದಾಯಿಸಬೇಕೆಂಬ ಸೆನ್ಸಾರ್ ನಿಯಮ ಇರುವುದರಿಂದ 'ಸಂಗೀತಾ ಬಾರ್ ಅಂಡ್ ರೆಸ್ಟೋರೆಂಟ್' ಹೆಸರಿನಲ್ಲೇ ಚಿತ್ರವನ್ನು ಬಿಡುಗಡೆ ಮಾಡುತ್ತಿದ್ದೇವೆ ಎಂದು ತಿಳಿಸಿದರು.

'ಉತ್ತಮ ಚಿತ್ರ ಮಾಡಿ ಪ್ರೇಕ್ಷಕರ ರಂಜಿಸಿ, ಪ್ರಚಾರಕ್ಕಾಗಿ ಹಿರಿಯರನ್ನು ನಿಂದಿಸಬೇಡಿ': ಚೇತನ್ ಅಹಿಂಸಾಗೆ ಹಿರಿಯ ನಟ ಜಗ್ಗೇಶ್ ಕಿವಿಮಾತು

ಚಿತ್ರದ ಎರಡು ಕಾಲಘಟ್ಟಗಳಿಗೆ ಅನುಗುಣವಾಗಿ ಪಾತ್ರಗಳಲ್ಲೂ ವೈವಿಧ್ಯವಿದೆ. ಕೋಮಲ್ ದ್ವಿಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದು, ಇತಿಹಾಸ ಹೇಳುವ ಭಾಗದಲ್ಲಿ ರಾಜನ ಆಸ್ಥಾನದ ಚಿತ್ರಕಾರನಾಗಿ ಹಾಗೂ ಸಮಕಾಲೀನ ಕಥೆಯಲ್ಲಿ ನಿರ್ದೇಶಕನಾಗಿ ನಟಿಸಿದ್ದಾರೆ.

ಮೇಘನಾ ರಾಜ್ ಐತಿಹಾಸಿಕ ಭಾಗದಲ್ಲಿ ರಾಣಿಯ ಪಾತ್ರ ನಿರ್ವಹಿಸಿದರೆ, ಬಾರ್ ಹಿನ್ನೆಲೆಯ ಕಥೆಯಲ್ಲಿ ನಾಯಕಿಯಾಗಿ ಕಾಣಿಸಿಕೊಳ್ಳಲಿದ್ದಾರೆ. ಉಳಿದಂತೆ ಪ್ರಮೋದ್ ಶೆಟ್ಟಿ, ವಜ್ರಧೀರ್ ಜೈನ್, ಪ್ರಕಾಶ್ ತುಂಬಿನಾಡ್, ರಘು ರಾಮನಕೊಪ್ಪ, ಎಂ.ಕೆ. ಮಾತಾ, ಪ್ರಶಾಂತ್ ಸಿದ್ದಿ ಹಾಗೂ ನಿರ್ದೇಶಕ ಸಂದೇಶ್ ಶೆಟ್ಟಿ ಕೂಡ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಜ್ಯೋತಿ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ವಿಕಾಸ್ ಎಸ್. ಶೆಟ್ಟಿ ಚಿತ್ರವನ್ನು ನಿರ್ಮಿಸಿದ್ದಾರೆ. ಕುಂದಾಪುರ, ಶಿವಮೊಗ್ಗ ಹಾಗೂ ತೀರ್ಥಹಳ್ಳಿಯಲ್ಲಿ 75 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಅಂಪಾರು ಸಮೀಪದ ವಾಲ್ಕೂರು ಗ್ರಾಮದಲ್ಲಿ ಎರಡು ಎಕರೆ ಪ್ರದೇಶದಲ್ಲಿ ಏಳು ಬೃಹತ್ ಸೆಟ್‌ಗಳನ್ನು ನಿರ್ಮಿಸಲಾಗಿದ್ದು, ಚಿತ್ರದ ಸುಮಾರು ಶೇ.90ರಷ್ಟು ಚಿತ್ರೀಕರಣ ಇಲ್ಲಿಯೇ ನಡೆದಿದೆ.

"ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕೆಲಸ ಬಹುತೇಕ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಚಿತ್ರವನ್ನು ಚಿತ್ರಮಂದಿರಗಳಿಗೆ ತರಲು ಸಿದ್ಧತೆ ನಡೆಸುತ್ತಿದ್ದೇವೆ. ಈ ಹಿಂದೆ ನಾನು ನಿರ್ದೇಶಿಸಿದ ಚಿತ್ರಗಳಿಗಿಂತ ಇದು ಸಂಪೂರ್ಣ ಭಿನ್ನವಾದ ಸೃಜನಶೀಲ ಪ್ರಯಾಣವಾಗಿದೆ. ಚಿತ್ರದ ಕಥಾವಸ್ತು, ಕಲಾವಿದರು ಹಾಗೂ ತಂತ್ರಜ್ಞರ ಕೆಲಸ ಈ ಪ್ರಯೋಗವನ್ನು ವಿಭಿನ್ನವಾಗಿಸಿದೆ.

'ಸಂಗೀತಾ ಬಾರ್ ಅಂಡ್ ರೆಸ್ಟೋರೆಂಟ್' ಕನ್ನಡ ಚಿತ್ರರಂಗದಲ್ಲಿ ವಿಶಿಷ್ಟ ಪ್ರಯೋಗವಾಗಿ ಗುರುತಿಸಿಕೊಳ್ಳಲಿದೆ ಎಂಬ ವಿಶ್ವಾಸವಿದೆ" ಎಂದು ಸಂದೇಶ್ ಶೆಟ್ಟಿ ಅಜ್ರಿ ಹೇಳಿದ್ದಾರೆ. ಚಿತ್ರವನ್ನು 2027ರ ಡಿಸೆಂಬರ್‌ನಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ಯೋಜನೆ ರೂಪಿಸಿದೆ.

ನಿಗೂಢತೆಯ 'ಅಮರಾವತಿ ಪೊಲೀಸ್ ಸ್ಟೇಷನ್':ಧರ್ಮ ಕೀರ್ತಿರಾಜ್ ಅಭಿನಯದ ಚಿತ್ರದ ಟ್ರೇಲರ್ ಬಿಡುಗಡೆ



ನಾಪತ್ತೆ ಪ್ರಕರಣಗಳು, ಕೊಲೆ ಹಾಗೂ ನಿಗೂಢ ಘಟನೆಗಳ ಸುತ್ತ ಸಾಗುವ ಸಸ್ಪೆನ್ಸ್‌ಥ್ರಿಲ್ಲರ್ ಕಥಾಹಂದರದ 'ಅಮರಾವತಿ ಪೊಲೀಸ್ ಸ್ಟೇಷನ್' ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ಫಿಲಂ ಚೇಂಬರ್ ಮಾಜಿ ಅಧ್ಯಕ್ಷ ಬಾಮ ಹರೀಶ್ ಹಾಗೂ ಹಿರಿಯ ಪ್ರಚಾರಕರ್ತ ನಾಗೇಂದ್ರ ಟ್ರೇಲರ್ ಅನಾವರಣಗೊಳಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ಕಡಲ ತೀರದ ಕಾಲ್ಪನಿಕ ಊರು ಅಮರಾವತಿಯಲ್ಲಿ ಊರಗೌಡ ಕಾಣೆಯಾಗುತ್ತಾನೆ. ತನಿಖೆಗೆ ಬಂದ ಪೊಲೀಸರೂ ನಾಪತ್ತೆಯಾಗುತ್ತಾರೆ. ಇದರ ಹಿಂದಿನ ರಹಸ್ಯ ಭೇದಿಸಲು ಬರುವ ಮಫ್ತಿ ಪೊಲೀಸ್ ಸುತ್ತ ಕಥೆ ಸಾಗುತ್ತದೆ. ಪುನೀತ್ ಅರಸೀಕೆರೆ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿದ್ದಾರೆ.

ಧರ್ಮ ಕೀರ್ತಿರಾಜ್ ಅಮಾನತುಗೊಂಡ ಪೊಲೀಸ್ ಅಧಿಕಾರಿಯಾಗಿ ನಟಿಸಿದ್ದು, ಗುರುರಾಜ್ ಜಗ್ಗೇಶ್ ನಕಾರಾತ್ಮಕ ಛಾಯೆಯ ಕ್ರೂರಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಹಿರಿಯ ನಟ ಧರ್ಮ ಪೊಲೀಸ್ ಅಧಿಕಾರಿಯಾಗಿದ್ದಾರೆ. ನಾಯಕಿ ವೇದ್ವಿಕಾಗೆ ಇದು ಮೊದಲ ಕನ್ನಡ ಚಿತ್ರ. ಮನಾಲಿಯಲ್ಲಿ ಚಿತ್ರೀಕರಿಸಿದ ಯುಗಳ ಗೀತೆ ಚಿತ್ರದ ವಿಶೇಷತೆಗಳಲ್ಲಿ ಒಂದು ಎಂದು ಅವರು ತಿಳಿಸಿದರು.

ಚಿತ್ರದಲ್ಲಿ ರೈತರ ಬದುಕು ಹಾಗೂ ಕೃತಕ ಆಹಾರದಿಂದ ಉಂಟಾಗುವ ಸಮಸ್ಯೆಗಳನ್ನೂ ಪ್ರಸ್ತಾಪಿಸಲಾಗಿದೆ ಎಂದು ನಿರ್ದೇಶಕ ಪುನೀತ್ ಅರಸೀಕೆರೆ ಹೇಳಿದರು. ಮಾಳವಿಕಾ ಅವಿನಾಶ್ ಪೊಲೀಸ್ ಕಮಿಷನರ್ ಪಾತ್ರದಲ್ಲಿದ್ದು, ಡಿಸೆಂಬರ್‌ನಲ್ಲಿ ಚಿತ್ರ ಬಿಡುಗಡೆ ಮಾಡುವ ಯೋಜನೆಯಿದೆ.

ಯುವ ಪವರ್ ಪಿಕ್ಚರ್ಸ್ ಲಾಂಛನದಲ್ಲಿ ಪವರ್ ಪಿಕ್ಚರ್ ಮತ್ತು ಎನ್. ಅನಿತಾ ಸುಕೇಂದ್ರ ನಿರ್ಮಿಸಿರುವ ಚಿತ್ರದಲ್ಲಿ ಸಾಧು ಕೋಕಿಲ, ನಾಗೇಂದ್ರ ಪ್ರಸಾದ್, ಧರ್ಮಣ್ಣ ಕಡೂರು, ಕಾಕ್ರೋಚ್ ಸುಧಿ ಹಾಗೂ ಡ್ರ್ಯಾಗನ್ ಮಂಜು ಸೇರಿದಂತೆ ಹಲವು ಕಲಾವಿದರಿದ್ದಾರೆ. ರೋಣದ ಬಕ್ಕೇಶ್ ಸಂಗೀತ, ಗೌತಮ್ ಮಟ್ಟಿ ಛಾಯಾಗ್ರಹಣ, ದೀಪು ಸಂಕಲನ ಹಾಗೂ ಡಿಫರೆಂಟ್ ಡ್ಯಾನಿ ಮತ್ತು ಅಲ್ಟಿಮೇಟ್ ಶಿವು ಅವರ ಸಾಹಸ ನಿರ್ದೇಶನವಿದೆ.

ಚಿತ್ರೀಕರಣ ಮುಗಿಸಿದ 'ನೆನಪಾದಳು ಶಾಕುಂತಲೆ':ಪುರಾಣದ ಪ್ರೇಮಕಾವ್ಯಕ್ಕೆ ಆಧುನಿಕ ಸ್ಪರ್ಶ



ಪುರಾಣದ ದುಷ್ಯಂತ–ಶಾಕುಂತಲೆಯ ಪ್ರೇಮಕಥೆಯ ಕಾವ್ಯಾತ್ಮಕ ಸ್ಪರ್ಶದೊಂದಿಗೆ ಆಧುನಿಕ ಪ್ರೇಮದ ಭಾವನೆಗಳನ್ನು ಬೆಸೆಯುವ 'ನೆನಪಾದಳು ಶಾಕುಂತಲೆ' ಚಿತ್ರದ ಚಿತ್ರೀಕರಣ ಪೂರ್ಣಗೊಂಡಿದೆ. ಇತ್ತೀಚೆಗೆ ಶ್ರೀ ಬಂಡೆ ಮಹಾಕಾಳಮ್ಮ ದೇವಸ್ಥಾನದ ಮುಂದೆ ಕುಂಬಳಕಾಯಿ ಒಡೆಯುವ ಮೂಲಕ ಚಿತ್ರತಂಡ ಚಿತ್ರೀಕರಣಕ್ಕೆ ತೆರೆ ಎಳೆದಿದೆ.

ಸದ್ಯ ಸೆನ್ಸಾರ್ ಹಂತದಲ್ಲಿರುವ ಚಿತ್ರವನ್ನು ನವೆಂಬರ್‌ನಲ್ಲಿ ಬಿಡುಗಡೆ ಮಾಡಲು ಯೋಜಿಸಲಾಗಿದೆ. ಭಗವದ್ಗೀತೆಓದಿ ಕಿರಣ್ ಹಳ್ಳಿಮೈಸೂರು ಅರ್ಪಿಸುವ ಈ ಚಿತ್ರವನ್ನು ವಿಸ್ಮಯ ವೆಂಚರ್ಸ್ ಮೂಲಕ ವಿಸ್ಮಯ ಕೆ. ನಿರ್ಮಿಸಿದ್ದಾರೆ. ಭಾಸ್ಕರನ್ ಮುತ್ತುಸ್ವಾಮಿ ಸಹ ನಿರ್ಮಾಪಕರಾಗಿದ್ದಾರೆ. ಈ ಹಿಂದೆ 'ಸಾಲ್ಟ್' ಚಿತ್ರವನ್ನು ನಿರ್ಮಿಸಿದ್ದ ನಿರ್ಮಾಣ ಸಂಸ್ಥೆ, ಐದು ವರ್ಷಗಳ ಬಳಿಕ ವಿಭಿನ್ನ ಪ್ರೇಮಕಥೆಯೊಂದಿಗೆ ಪ್ರೇಕ್ಷಕರ ಮುಂದೆ ಬರುತ್ತಿದೆ. ವಿನಯ್ ಚಂದ್ರಹಾಸ ಮತ್ತು ವಿರಾಜ್ ಕೋಲಾಟ್ಲು ಕಥೆ, ಚಿತ್ರಕಥೆ ಹಾಗೂ ಸಂಭಾಷಣೆ ರಚಿಸಿದ್ದು, ವಿನಯ್ ಚಂದ್ರಹಾಸ ನಿರ್ದೇಶನದ ಹೊಣೆ ಹೊತ್ತಿದ್ದಾರೆ.

ಪಾರ್ಥಸಾರಥಿ ಎಂಬ ಯುವ ಸ್ಟಾರ್ಟ್‌ಅಪ್ ಸಂಸ್ಥಾಪಕನ ಪ್ರೇಮಪಯಣವೇ ಚಿತ್ರದ ಕಥಾ-ಹಂದರ. ಮೊದಲ ಪ್ರೀತಿಯ ವೈಫಲ್ಯದಿಂದ ಹೊರಬರಲು ನಾಯಕ ತನ್ನ ಅಕ್ಕನ ಊರಿಗೆ ಬರುತ್ತಾನೆ. ಅಲ್ಲಿನ ಹಳೆಯ ಗ್ರಂಥಾಲಯದಲ್ಲಿ ಯುವತಿಯೊಬ್ಬಳ ಪರಿಚಯವಾಗುತ್ತದೆ. ಆಕೆಯ ಸಾನ್ನಿಧ್ಯದಿಂದ ನಾಯಕನ ಬದುಕಿನ ದಿಕ್ಕೇ ಬದಲಾಗುತ್ತದೆ. ಹೀಗೆ ನೆನಪು, ಪ್ರೀತಿ ಮತ್ತು ಹಂಬಲಗಳ ನಡುವೆ ಸಾಗುವ ಕಥೆಗೆ ಪುರಾಣದ ದುಷ್ಯಂತ–ಶಾಕುಂತಲೆಯ ಪ್ರೇಮದ ನೆರಳನ್ನು ಬೆಸೆಯಲಾಗಿದೆ.

ರಂಗಭೂಮಿ ಹಿನ್ನೆಲೆಯ ವಿರಾಜ್ ಕೋಲಾಟ್ಲು ಈ ಚಿತ್ರದ ಮೂಲಕ ನಾಯಕನಾಗಿ ಬೆಳ್ಳಿತೆರೆಗೆ ಪರಿಚಯವಾಗುತ್ತಿದ್ದಾರೆ. ಕಾವ್ಯ ಭಗವಂತ್ ನಾಯಕಿಯಾಗಿ ನಟಿಸಿದ್ದು, ತಬಲಾ ನಾಣಿ, ಮಂಡ್ಯ ರಮೇಶ್, ಸ್ಪಂದನ ಪ್ರಸಾದ್, ಸುನೇತ್ರ ಪಂಡಿತ್, ಮೂಗು ಸುರೇಶ್ ಹಾಗೂ ಹರ್ಷವರ್ಧನ ಪ್ರಸಾದ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಪ್ರಸನ್ನಕುಮಾರ್ ಎಂ.ಎಸ್. ಸಂಗೀತ ಸಂಯೋಜಿಸಿದ್ದು, ಚಿತ್ರದ ಐದೂ ಹಾಡುಗಳಿಗೆ ಪ್ರಮೋದ್ ಮರವಂತೆ ಸಾಹಿತ್ಯ ರಚಿಸಿದ್ದಾರೆ. ವಿಶಾಲ್ ಕುಮಾರ್ ಗೌಡ ಛಾಯಾಗ್ರಹಣ ಚಿತ್ರಕ್ಕಿದೆ.

ಆಧುನಿಕ ಬದುಕಿನ ಪ್ರೇಮದ ತಲ್ಲಣಗಳನ್ನು ಪುರಾಣದ ಕಾವ್ಯಾತ್ಮಕ ಸೊಗಡಿನೊಂದಿಗೆ ಕಟ್ಟಿಕೊಡುವ ಪ್ರಯತ್ನ 'ನೆನಪಾದಳು ಶಾಕುಂತಲೆ' ಚಿತ್ರದಲ್ಲಿದೆ. ವಿಭಿನ್ನ ಶೀರ್ಷಿಕೆ ಹಾಗೂ ಭಾವನಾತ್ಮಕ ಕಥಾಹಂದರದ ಮೂಲಕ ಗಮನ ಸೆಳೆಯುತ್ತಿರುವ ಈ ಸಿನಿಮಾ, ಬಿಡುಗಡೆಗೆ ಸಿದ್ಧತೆ ನಡೆಸುತ್ತಿದೆ ಎಂದು ಚಿತ್ರದ ಕ್ರಿಯೇಟಿವ್ ಹೆಡ್ ಕಿರಣ್ ಹಳ್ಳಿಮೈಸೂರು ತಿಳಿಸಿದ್ದಾರೆ.

ಟ್ರೋಲ್, ವದಂತಿಗಳಿಗೆ ಉತ್ತರ: ಶೀಘ್ರದಲ್ಲೇ ಹಸೆಮಣೆ ಏರಲಿದ್ದಾರೆ ಐಶ್ವರ್ಯಾ ಸಿಂಧೋಗಿ ಮತ್ತು ಶಿಶಿರ್ ಶಾಸ್ತ್ರಿ!

ಬೆಂಗಳೂರು : ಬಿಗ್ ಬಾಸ್ ಕನ್ನಡ ಸೀಸನ್ 11ರ ಮೂಲಕ ಜನಪ್ರಿಯತೆ ಗಳಿಸಿದ್ದ ನಟ ಶಿಶಿರ್ ಶಾಸ್ತ್ರಿ ಹಾಗೂ ನಟಿ ಐಶ್ವರ್ಯಾ ಸಿಂದೋಗಿ ತಮ್ಮ ಅಭಿಮಾನಿಗಳಿಗೆ ಸಿಹಿ ಸುದ್ದಿ ನೀಡಿದ್ದಾರೆ.

ಇಷ್ಟು ದಿನಗಳ ಕಾಲ ತಮ್ಮಿಬ್ಬರ ಬಗ್ಗೆ ಹರಿದಾಡುತ್ತಿದ್ದ ಎಲ್ಲಾ ವದಂತಿಗಳು ಹಾಗೂ ಟ್ರೋಲ್‌ಗಳಿಗೆ ಉತ್ತರ ನೀಡಿರುವ ಈ ಜೋಡಿ, ಶೀಘ್ರದಲ್ಲೇ ನಿಶ್ಚಿತಾರ್ಥ ಮಾಡಿಕೊಂಡು ಹಸಮಣೆ ಏರುವುದಾಗಿ ಅಧಿಕೃತವಾಗಿ ಘೋಷಿಸಿದೆ.

ಶಿಶಿರ್ ಶಾಸ್ತ್ರಿ– ಐಶ್ವರ್ಯ ಸಿಂಧೋಗಿ ನಡುವೆ ತುಸು ಹೆಚ್ಚೇ ಆತ್ಮೀಯತೆ ಇತ್ತು. ಆದರೆ ಪ್ರೀತಿ, ಪ್ರಣಯದ ಪ್ರಶ್ನೆಗೆ ಇಬ್ಬರು ಸ್ನೇಹಿತರಷ್ಟೇ ಎನ್ನುವ ಉತ್ತರವನ್ನು ಹೇಳಿ ಸುಮ್ಮನಾಗುತ್ತಿದ್ದರು.

ಸುತ್ತಾಟ, ರೀಲ್ಸ್ ಎನ್ನುತ್ತಾ ಶಿಶಿರ್ – ಐಶ್ವರ್ಯ ಇಬ್ಬರು ಒಟ್ಟಾಗಿ ಹೆಚ್ಚು ಕಾಣಿಸಿಕೊಳ್ಳುತ್ತಿದ್ದ ಕಾರಣ ಇಬ್ಬರದ್ದು ಸೂಪರ್ ಜೋಡಿ ಎಂದು ಅನೇಕರು ಕಮೆಂಟ್ ಮಾಡುತ್ತಿದ್ದರು. ಇದೀಗ ಎಲ್ಲಾ ಊಹೆಗಳಿಗೆ ಇಬ್ಬರು ಸ್ಪಷ್ಟನೆ ನೀಡಿದ್ದಾರೆ. 'ಬಿಗ್ ಅನೌನ್ಸ್‌ಮೆಂಟ್ ಎಂದು ವಿಡಿಯೋ ಹಂಚಿಕೊಂಡಿರುವ ಇಬ್ಬರು ತಾವು ಎಂಗೇಜ್‌ಮೆಂಟ್ ಆಗುತ್ತಿದ್ದೇವೆ ಎಂದು ಘೋಷಿಸಿದ್ದಾರೆ.

ಆ ಮೂಲಕ ಹೊರಗಡೆ ಹರಿದಾಡುತ್ತಿದ್ದ ಊಹಾಪೋಹಾಗಳು ನಿಜವೆಂದು ಹೇಳಿದ್ದಾರೆ. ಜನ ಮನಸ್ಸಿನಲ್ಲಿ ಏನು ಓಡುತ್ತಿದೆ ಎನ್ನುವ ಕುರಿತ ವಿಡಿಯೋ ಹಂಚಿಕೊಂಡಿರುವ ಜೋಡಿ ಅಧಿಕೃತವಾಗಿ ಎಂಗೇಜ್‌ಮೆಂಟ್ ಆಗುತ್ತಿದ್ದೇವೆ ಎಂದು ವಿಡಿಯೋದಲ್ಲಿ ಹೇಳಿದ್ದಾರೆ.ಸೂಪರ್‌ಸ್ಟಾರ್ ರಜನಿಕಾಂತ್ ಜೊತೆ ಶ್ರೀಲೀಲಾ

ಪತ್ನಿ, ಚಿಕ್ಕಪ್ಪ ಸೇರಿ 9 ಜನರ ವಿರುದ್ಧ ನ್ಯಾಯಾಲಯದಲ್ಲಿ ಖಾಸಗಿ ದೂರು । ಮೋಸ ಹೋದ ಪತಿಯಿಂದ ನ್ಯಾಯಕ್ಕಾಗಿ ಕಾನೂನು ಸಮರ

ಮಗಳೆಂದು ಕರೆದು ಮದುವೆ ಮಾಡಿಸಿದ ಚಿಕ್ಕಪ್ಪನೇ ಆಕೆಯನ್ನು ವರಿಸಿದ!



ಪಾಂಡವ ನ್ಯೂಸ್, ರಾಣೆಬೆನ್ನೂರು : ಮಗಳೆಂದು ಪ್ರೀತಿಯಿಂದ ಕರೆದು, ಆಕೆಗೆ ಮದುವೆ ಮಾಡಿಸಿ ಹೊಸ ಬದುಕು ಕಟ್ಟಿಕೊಟ್ಟಿದ್ದ ಚಿಕ್ಕಪ್ಪನೇ ಕೊನೆಗೆ ಆಕೆಯೊಂದಿಗೆ ಅಕ್ರಮ ಸಂಬಂಧ ಬೆಳೆಸಿ, ಮತ್ತೊಮ್ಮೆ ಮದುವೆಯಾಗಿದ್ದಾನೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಅಚ್ಚರಿ ಮೂಡಿಸುವ ಈ ಪ್ರಕರಣ ರಾಣೆಬೆನ್ನೂರಿನಲ್ಲಿ ಬೆಳಕಿಗೆ ಬಂದಿದ್ದು, ಮೋಸಕ್ಕೊಳಗಾಗಿರುವ ಪತಿ ನ್ಯಾಯಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರಿದ್ದಾರೆ.

ರಾಣೆಬೆನ್ನೂರಿನ ಸೈಕಲ್‌ಗಾರ ಓಣಿಯ ದಾದಾಪೀರ್ ಅನ್ಸಲಿ ಮುಲ್ಲಾ ಅವರು ತಮ್ಮ ಪತ್ನಿ, ಸಂಬಂಧದಲ್ಲಿ ಚಿಕ್ಕಪ್ಪನಾದ ಜಾಕೀರ್ ಹಾಗೂ ಈ ಕೃತ್ಯಕ್ಕೆ ಸಹಕರಿಸಿದ್ದಾರೆ ಎನ್ನಲಾದ ಇತರ ಏಳು ಜನರ ವಿರುದ್ಧ ರಾಣೆಬೆನ್ನೂರಿನ 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದಾರೆ. ಒಟ್ಟು ಒಂಬತ್ತು ಜನರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ನ್ಯಾಯಾಲಯದ ಮೊರೆ ಹೋಗಿದ್ದಾರೆ.

ಮದುವೆ ಮಾಡಿಸಿದ್ದ ಚಿಕ್ಕಪ್ಪನೇ ವರನಾದ ಆರೋಪ! : ದೂರುದಾರರ ಆರೋಪದ ಪ್ರಕಾರ, ಜಾಕೀರ್ ಅವರು ಸಂಬಂಧದಲ್ಲಿ ಚಿಕ್ಕಪ್ಪನಾಗಿದ್ದು, ಪತ್ನಿಯನ್ನು ಮಗಳೆಂದೇ ಸಂಬೋಧಿಸುತ್ತಿದ್ದರು.

ಆಕೆಯ ಮದುವೆ ಮಾಡಿಸುವಲ್ಲಿಯೂ ಪ್ರಮುಖ ಪಾತ್ರ ವಹಿಸಿದ್ದರು ಎನ್ನಲಾಗಿದೆ. ಆದರೆ, ಕಾಲಕ್ರಮೇಣ ಅವರಿಬ್ಬರ ನಡುವೆ ಅಕ್ರಮ ಸಂಬಂಧ ಬೆಳೆದಿದ್ದು, ಬಳಿಕ ಇಬ್ಬರೂ ಮದುವೆಯಾಗಿದ್ದಾರೆ ಎಂಬುದು ದಾದಾಪೀರ್ ಅವರ ಆರೋಪವಾಗಿದೆ.

ತನ್ನ ಪತ್ನಿ ಮತ್ತು ಸಂಬಂಧದಲ್ಲಿ ಚಿಕ್ಕಪ್ಪನಾಗಿದ್ದ ವ್ಯಕ್ತಿಯ ನಡುವಿನ ಈ ಬೆಳವಣಿಗೆಯಿಂದ ದಾದಾಪೀರ್ ಆಘಾತಕ್ಕೊಳಗಾಗಿದ್ದಾರೆ ಎನ್ನಲಾಗಿದೆ. ನಂಬಿಕೆ ಇಟ್ಟು ಸಂಸಾರ ನಡೆಸುತ್ತಿದ್ದ ತನಗೆ ಇಬ್ಬರೂ ಸೇರಿ ವಂಚಿಸಿದ್ದಾರೆ ಎಂದು ಆರೋಪಿಸಿರುವ ಅವರು, ಈ ಬೆಳವಣಿಗೆಯಲ್ಲಿ ಇತರರ ಪಾತ್ರವೂ ಇದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಒಂಬತ್ತು ಜನರ ವಿರುದ್ಧ ಖಾಸಗಿ ದೂರು : ಘಟನೆಯಿಂದ ನ್ಯಾಯಕ್ಕಾಗಿ ಅಲೆದಾಡುವಂತಾಗಿರುವ ದಾದಾಪೀರ್, ಪತ್ನಿ ಹಾಗೂ ಜಾಕೀರ್ ಸೇರಿದಂತೆ ಒಂಬತ್ತು ಜನರ ವಿರುದ್ಧ ರಾಣೆಬೆನ್ನೂರಿನ 2ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ಖಾಸಗಿ ದೂರು ಸಲ್ಲಿಸಿದ್ದಾರೆ. ಪ್ರಕರಣದಲ್ಲಿ ಆರೋಪಿಗಳ ಪಾತ್ರದ ಕುರಿತು ತನಿಖೆ ಹಾಗೂ ಕಾನೂನು ಕ್ರಮ ಕೈಗೊಳ್ಳಬೇಕೆಂದು ನ್ಯಾಯಾಲಯದ ಮೊರೆ ಹೋಗಿದ್ದಾರೆ.

ನ್ಯಾಯಾಲಯದಲ್ಲಿ ದೂರು ದಾಖಲಿಸಿರುವುದಾಗಿ ದಾದಾಪೀರ್ ಪರ ವಕೀಲ ನಾಗರಾಜ ಕುಡುಪಲಿ ತಿಳಿಸಿದ್ದಾರೆ. "ದಾದಾಪೀರ್ ಅವರಿಗೆ ಅವರ ಪತ್ನಿ ಮತ್ತು ಸಂಬಂಧದಲ್ಲಿ ಚಿಕ್ಕಪ್ಪನಾದ ಜಾಕೀರ್ ಸೇರಿ ಮೋಸ ಮಾಡಿದ್ದಾರೆ. ಆದ್ದರಿಂದ ಪ್ರಕರಣಕ್ಕೆ ಸಂಬಂಧಿಸಿ ಒಂಬತ್ತು ಜನರ ವಿರುದ್ಧ ನ್ಯಾಯಾಲಯದಲ್ಲಿ ಖಾಸಗಿ ದೂರು ದಾಖಲಿಸಿದ್ದೇವೆ" ಎಂದು ಅವರು ಹೇಳಿದರು.

ಮದುವೆ ಮಾಡಿಸಿ ಬದುಕು ಕಟ್ಟಿಕೊಟ್ಟಿದ್ದ ಚಿಕ್ಕಪ್ಪನೇ ಮದುವೆಯಾದ ಆರೋಪ ಪ್ರಕರಣಕ್ಕೆ ಹೊಸ ತಿರುವು ನೀಡಿದ್ದು, ನ್ಯಾಯಾಲಯದ ಮುಂದಿನ ಕ್ರಮದತ್ತ ಎಲ್ಲರ ಗಮನ ನೆಟ್ಟಿದೆ.

ಜನಾಭಿಪ್ರಾಯದ ಮೇರೆಗೆ ರಾಜಕೀಯ ಪ್ರವೇಶ: 2028ಕ್ಕೆ ಬ್ಯಾಡಗಿ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ ಉಮೇಶ ಕರಿಗಾರ ಘೋಷಣೆ



ಪಾಂಡವ ನ್ಯೂಸ್, ಬ್ಯಾಡಗಿ: ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಜನರ ಅಭಿಪ್ರಾಯ, ಸಲಹೆ ಹಾಗೂ ಒತ್ತಾಯದ ಮೇರೆಗೆ ರಾಜಕೀಯ ಕ್ಷೇತ್ರಕ್ಕೆ ಪ್ರವೇಶಿಸುತ್ತಿದ್ದು, 2028ರ ವಿಧಾನಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವುದಾಗಿ ಉದ್ಯಮಿ ಉಮೇಶ ಕರಿಗಾರ ಘೋಷಿಸಿದ್ದಾರೆ.ತಾಲೂಕಿನ ತಿಮಕಾಪುರ ಗ್ರಾಮದಲ್ಲಿ ಬುಧವಾರ ನಡೆದ ಕಾರ್ಯಕ್ರಮದಲ್ಲಿ ತಮ್ಮ ರಾಜಕೀಯ ಪ್ರವೇಶ ಹಾಗೂ ಚುನಾವಣಾ ಸ್ಪರ್ಧೆಯ ನಿರ್ಧಾರ ಪ್ರಕಟಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಬೀರಲಿಂಗೇಶ್ವರ ದೇವಸ್ಥಾನ ನಿರ್ಮಾಣ ಕಾರ್ಯಕ್ಕೆರೂ. 5 ಲಕ್ಷ ದೇಣಿಗೆ ನೀಡಿದರು. ಗ್ರಾಮಕ್ಕೆ ಆಗಮಿಸಿದ ಅವರನ್ನು ಗ್ರಾಮಸ್ಥರು ಅದ್ದೂರಿ ಮೆರವಣಿಗೆಯ ಮೂಲಕ ಸ್ವಾಗತಿಸಿ ಬರಮಾಡಿಕೊಂಡರು.ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಆಶಯ ಹೊಂದಿರುವ ಉಮೇಶ ಕರಿಗಾರ ಅವರು ಶಿಕ್ಷಣ, ಕೃಷಿ, ಉದ್ಯೋಗ, ಆರೋಗ್ಯ, ಗ್ರಾಮೀಣಾಭಿವೃದ್ಧಿ ಹಾಗೂ ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೆ ಆದ್ಯತೆ ನೀಡುವ ಚಿಂತನೆ ಹೊಂದಿದ್ದಾರೆ.ಶಿಕ್ಷಣ ಸುಧಾರಣೆಗೆ ಆದ್ಯತೆ: ಕ್ಷೇತ್ರದ ಸರ್ಕಾರಿ ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಅಗತ್ಯ ತರಗತಿ ಕೊಠಡಿಗಳು, ಶುದ್ಧ ಕುಡಿಯುವ ನೀರು, ಶೌಚಗೃಹ ಸೇರಿದಂತೆ ಮೂಲಸೌಕರ್ಯ ಕಲ್ಪಿಸುವುದು ಪ್ರಮುಖ ಆದ್ಯತೆಯಾಗಿದೆ. ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ದೊರೆಯುವಂತಾಗಬೇಕು ಎಂಬ ಆಶಯ ಹೊಂದಿದ್ದಾರೆ.ರೈತರ ಸಮಸ್ಯೆಗಳಿಗೆ ಸ್ಪಂದನೆ: ರೈತರು ಎದುರಿಸುತ್ತಿರುವ ನೀರಾವರಿ ಕೊರತೆ, ಬೆಳೆಗಳಿಗೆ ಸೂಕ್ತ ಬೆಲೆ, ಬೆಳೆ ನಷ್ಟ ಪರಿಹಾರ ಹಾಗೂ ಕೃಷಿ ಉತ್ಪನ್ನಗಳ ಮಾರುಕಟ್ಟೆ ಸಮಸ್ಯೆಗಳಿಗೆ ಸ್ಪಂದಿಸುವುದು ಮತ್ತು ಕೃಷಿ ಅಭಿವೃದ್ಧಿಗೆ ಪೂರಕ ವಾತಾವರಣ ನಿರ್ಮಿಸುವ ಉದ್ದೇಶ ಹೊಂದಿದ್ದಾರೆ.ಯುವಕರಿಗೆ ಉದ್ಯೋಗಾವಕಾಶ: ಕ್ಷೇತ್ರದ ನಿರುದ್ಯೋಗಿ ಯುವಕರಿಗೆ ಸ್ಥಳೀಯವಾಗಿಯೇ ಉದ್ಯೋಗ ದೊರೆಯುವಂತಾಗಬೇಕು. ಕೌಶಲಾಭಿವೃದ್ಧಿ ತರಬೇತಿ, ಸ್ವಯಂ ಉದ್ಯೋಗಕ್ಕೆ ಪ್ರೋತ್ಸಾಹ ಹಾಗೂ ಸಣ್ಣ ಕೈಗಾರಿಕೆಗಳ ಬೆಳವಣಿಗೆಗೆ ಆದ್ಯತೆ ನೀಡುವ ಚಿಂತನೆ ಹೊಂದಿದ್ದಾರೆ. ಆರೋಗ್ಯ, ಗ್ರಾಮೀಣಾಭಿವೃದ್ಧಿಗೆ ಒತ್ತು: ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಬಲಪಡಿಸುವುದು, ಅಗತ್ಯ ವೈದ್ಯಕೀಯ ಸೌಲಭ್ಯ ಕಲ್ಪಿಸುವುದು, ಗ್ರಾಮಗಳಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಬೀದಿದೀಪಗಳ ವ್ಯವಸ್ಥೆ ಸುಧಾರಿಸುವುದು ಅವರ ಅಭಿವೃದ್ಧಿ ಚಿಂತನೆಯಲ್ಲಿದೆ.ದೇವಸ್ಥಾನಗಳ ಜೀರ್ಣೋದ್ಧಾರ: ಕ್ಷೇತ್ರದ ಗ್ರಾಮಗಳಲ್ಲಿರುವ ದೇವಸ್ಥಾನಗಳ ಜೀರ್ಣೋದ್ಧಾರ, ಧಾರ್ಮಿಕ ಕೇಂದ್ರಗಳ ಅಭಿವೃದ್ಧಿ ಹಾಗೂ ಸ್ಥಳೀಯ ಕಲೆ, ಸಂಸ್ಕೃತಿ ಮತ್ತು ಪರಂಪರೆಯ ಸಂರಕ್ಷಣೆಗೂ ಆದ್ಯತೆ ನೀಡುವ ಉದ್ದೇಶ ಹೊಂದಿದ್ದಾರೆ. ತಿಮಕಾಪುರ ಗ್ರಾಮದ ಬೀರಲಿಂಗೇಶ್ವರ ದೇವಸ್ಥಾನ ನಿರ್ಮಾಣಕ್ಕೆ ರೂ.5 ಲಕ್ಷ ದೇಣಿಗೆ ನೀಡಿರುವುದು ಕಾರ್ಯಕ್ರಮದ ವಿಶೇಷವಾಗಿತ್ತು.

ಉದ್ಯಮ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಉಮೇಶ ಕರಿಗಾರ ಅವರು ಜನರ ಅಭಿಪ್ರಾಯ ಹಾಗೂ ಕ್ಷೇತ್ರದ ಅಭಿವೃದ್ಧಿಯ ಆಶಯವನ್ನು ಮುಂದಿಟ್ಟುಕೊಂಡು ರಾಜಕೀಯ ಪ್ರವೇಶದ ನಿರ್ಧಾರ ಕೈಗೊಂಡಿದ್ದಾರೆ. 2028ರ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವ ಘೋಷಣೆಯೊಂದಿಗೆ ಬ್ಯಾಡಗಿ ಕ್ಷೇತ್ರದ ರಾಜಕೀಯ ವಲಯದಲ್ಲಿ ಹೊಸ ಚರ್ಚೆ ಆರಂಭವಾಗಿದೆ.

ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಸಾಮೂಹಿಕ ಪ್ರಯತ್ನ ಅಗತ್ಯ : ಡಾ. ನಾಗರಾಜ



ಪಾಂಡವ ನ್ಯೂಸ್, ಹಾವೇರಿ : ಜಿಲ್ಲೆಯಲ್ಲಿ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಶಿಕ್ಷಣ ಇಲಾಖೆಯ ಆಯ್ಕೆ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳ (ಸಿಆರ್‌ಪಿ) ಸಹಕಾರ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಾಗರಾಜ ಹೇಳಿದರು.

ನಗರದ ಜಿಲ್ಲಾ ಆರೋಗ್ಯ ಭವನದಲ್ಲಿ ಗುರುವಾರ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಹಾಗೂ ಜಿಲ್ಲಾ ಸರ್ವೇಕ್ಷಣಾ ಘಟಕದ ವತಿಯಿಂದ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಆಯ್ದ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು, ತಂಬಾಕು ಸೇವನೆಯಿಂದ ಉಂಟಾಗುವ ಆರೋಗ್ಯದ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ. ಶಾಲಾ-ಕಾಲೇಜುಗಳಲ್ಲಿ ತಂಬಾಕು ನಿಯಂತ್ರಣ ಜಾಗೃತಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಲ್ಲಿ ಸಿಆರ್‌ಪಿಗಳು ಪ್ರಮುಖ ಪಾತ್ರ ವಹಿಸಬೇಕು ಎಂದು ತಿಳಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಡಾ. ಸಂತೋಷ ದಡ್ಡಿ ಹಾಗೂ ದಾದಾಪೀರ ಹುಲಕಟ್ಟಿ ಅವರು ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಉದ್ದೇಶಗಳು, ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳು, ತಂಬಾಕು ವ್ಯಸನ ಮುಕ್ತಗೊಳಿಸುವ ಚಿಕಿತ್ಸಾ ಸೌಲಭ್ಯಗಳು ಹಾಗೂ ಕೋಟ್ಪಾ ಕಾಯ್ದೆ-2003ರ ಪ್ರಮುಖ ಅಂಶಗಳು ಮತ್ತು ಕಾಯ್ದೆಯ ಅನುಷ್ಠಾನದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ. ಜಗದೀಶ ಪಾಟೀಲ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ನ. 17ಕ್ಕೆ ಗುತ್ತಲದಲ್ಲಿ 21 ಅಡಿ ಏಕಶಿಲಾ ಬಸವಣ್ಣನ ಮೂರ್ತಿ ಲೋಕಾರ್ಪಣೆ




ಪಾಂಡವ ನ್ಯೂಸ್,ಗುತ್ತಲ : ಪಟ್ಟಣದ ಕಲ್ಮಠದ ಆವರಣದಲ್ಲಿ ನ. 15ರಿಂದ 17ರವರೆಗೆ ಮೂರು ದಿನಗಳ ಕಾಲ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ನ. 17ರಂದು ಬೆಳಿಗ್ಗೆ 7 ಗಂಟೆಗೆ 21 ಅಡಿ ಎತ್ತರದ ವಿಶ್ವಗುರು ಬಸವಣ್ಣನ ಏಕಶಿಲಾ ಮೂರ್ತಿಯನ್ನು ಲೋಕಾರ್ಪಣೆಗೊಳಿಸಲಾಗುವುದು ಎಂದು ಕಲ್ಮಠದ ಪೂಜ್ಯ ಗುರುಸಿದ್ಧ ಸ್ವಾಮೀಜಿ ತಿಳಿಸಿದರು.ಪಟ್ಟಣದ ಕಲ್ಮಠದ ಆವರಣದಲ್ಲಿ ಬುಧವಾರ ಕಾರ್ಯಕ್ರಮದ ಆಮಂತ್ರಣ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಲಿಂ. ಸಂಗನಬಸವ ಮಹಾಸ್ವಾಮಿಗಳ ಸಂಕಲ್ಪದಂತೆ ಬಸವಣ್ಣನವರ ಬೃಹತ್ 21 ಅಡಿ ಏಕಶಿಲಾ ಮೂರ್ತಿ ಇದು ಗುತ್ತಲದ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ. ಬಸವಣ್ಣನವರ ಕಾಯಕ, ದಾಸೋಹ, ಸಮಾನತೆ ಹಾಗೂ ಮಾನವೀಯ ಮೌಲ್ಯಗಳನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಮೂರು ದಿನಗಳ ಕಾರ್ಯಕ್ರಮಗಳಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.ಬೆಳಗಟ್ಟಿ ರಾಮಲಿಂಗೇಶ್ವರ ಮಠದ ಬಸವರಾಜ ಸ್ವಾಮೀಜಿ ಮಾತನಾಡಿ, ಗುತ್ತಲ ಕಲ್ಮಠದ ಪೂಜ್ಯರು ಬಸವಣ್ಣನವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬಂದಿದ್ದಾರೆ. ಶ್ರವಣಬೆಳಗೊಳದ ಬಾಹುಬಲಿ ಮಾದರಿಯಲ್ಲಿ ನಿರ್ಮಿಸಿರುವ ಆಕರ್ಷಕ ಉದ್ಯಾನ ಹಾಗೂ ಏಕಶಿಲಾ ಬಸವಣ್ಣನ ಮೂರ್ತಿ ಪಟ್ಟಣದ ಸೌಂದರ್ಯ ಹೆಚ್ಚಿಸಲಿದೆ. ಮುಂದಿನ ದಿನಗಳಲ್ಲಿ ಗುತ್ತಲವು 'ಬಸವ ಗುತ್ತಲ' ಎಂಬ ಹೆಸರಿನಿಂದ ಪ್ರಸಿದ್ಧಿಯಾಗಲಿ ಎಂದು ಆಶಿಸಿದರು. ಹತ್ತಿಮತ್ತೂರಿನ ನಿಜಗುಣ ಸ್ವಾಮೀಜಿ ಮಾತನಾಡಿ, ಲಿಂ. ಸಂಗನಬಸವ ಸ್ವಾಮೀಜಿಗಳ ಕನಸು ನನಸಾಗುತ್ತಿರುವುದು ಸಂತಸದ ಸಂಗತಿ ಎಂದರು.ಕಾರ್ಯಕ್ರಮಗಳ ವಿವರ: ನ. 15ರಂದು ಬೆಳಿಗ್ಗೆ 10 ಗಂಟೆಗೆ ಸಿರಿಗೆರೆ ತರಳಬಾಳು ಬೃಹನ್ಮಠದ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿಗಳ ಸಾನ್ನಿಧ್ಯದಲ್ಲಿ ಕಾರ್ಯಕ್ರಮಗಳ ಉದ್ಘಾಟನೆ ನಡೆಯಲಿದೆ. ನ. 16ರಂದು ಬೆಳಿಗ್ಗೆ 10 ಗಂಟೆಗೆ ಹುಬ್ಬಳ್ಳಿ ಮೂರುಸಾವಿರ ಮಠದ ಗುರುಸಿದ್ಧರಾಜಯೋಗೀಂದ್ರ ಮಹಾಸ್ವಾಮೀಜಿ ಹಾಗೂ ಮುಂಡರಗಿ ಅನ್ನದಾನೇಶ್ವರ ಮಠದ ಡಾ. ಅನ್ನದಾನೇಶ್ವರ ಶಿವಯೋಗಿಗಳ ಸಾನ್ನಿಧ್ಯದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.ನ. 17ರಂದು ಬೆಳಿಗ್ಗೆ 7 ಗಂಟೆಗೆ ತುಮಕೂರು ಸಿದ್ಧಗಂಗಾ ಮಠದ ಸಿದ್ಧಲಿಂಗ ಮಹಾಸ್ವಾಮೀಜಿ ಹಾಗೂ ಗದಗ ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ 21 ಅಡಿ ಏಕಶಿಲಾ ಬಸವಣ್ಣನ ಮೂರ್ತಿ ಲೋಕಾರ್ಪಣೆಗೊಳ್ಳಲಿದೆ. ಕಾರ್ಯಕ್ರಮಕ್ಕೆ ಕೇಂದ್ರ ಹಾಗೂ ರಾಜ್ಯ ಸಚಿವರು, ಸಂಸದರು, ಶಾಸಕರು, ಜನಪ್ರತಿನಿಧಿಗಳು ಮತ್ತು ಗಣ್ಯರನ್ನು ಆಹ್ವಾನಿಸಲಾಗಿದೆ. ರಾಜ್ಯದ ವಿವಿಧ ಭಾಗಗಳಿಂದ ಭಕ್ತರು ಆಗಮಿಸುವ ನಿರೀಕ್ಷೆಯಿದೆ. ಆಮಂತ್ರಣ ಪತ್ರಿಕೆ ಬಿಡುಗಡೆ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸ್ಥಾಯಿ ಸಮಿತಿ ಅಧ್ಯಕ್ಷ ಪ್ರದೀಪ್ ಸಲಗೇರಿ, ಕೆ.ಎಂ. ಕೋವಳಿಮಠ, ನಾಗರಾಜ ಬಸೆಗಣ್ಣಿ, ಶಂಕರಪ್ಪ ಚಂದ್ರಾಪುರ, ಶಿವಪುತ್ರಪ್ಪ ನಿಲಪ್ಪನವರ, ಪ್ರಕಾಶ ಸೊಪ್ಪಿನ, ನಿಂಗಪ್ಪ ಪಿ.ಕೆ., ಪಾಲಾಕ್ಷಯ್ಯ ನೆಗಳೂರಮಠ, ಸಂತೋಷ ಚಿಕ್ಕಮಠ, ಚನ್ನಪ್ಪ ಕಲಾಲ, ವೀರೇಶ ಗಡ್ಡದೇವರಮಠ, ಮಾರುತಿ ಕೊಡಬಾಳ, ಶಿವಲಿಂಗೇಶ ಕುಂದೂರ ಸೇರಿದಂತೆ ಸಂಗನಬಸವ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ಇದ್ದರು.

ನೆಚ್ಚಿನ ಗೋವಿನ ಅಗಲಿಕೆಗೆ ರಟ್ಟಿಹಳ್ಳಿ ಜನತೆಯ ಕಣ್ಣೀರು

ಪ್ರೇಮದ ಊರಿನಿಂದ ದೂರವಾದ ಗೋವು; ಕೊನೆಗೆ ಸಾವು!

ರವಿ ಮೇಗಳಮನಿ



ಪಾಂಡವ ನ್ಯೂಸ್, ರಟ್ಟೀಹಳ್ಳಿ : ಸುಮಾರು 13 ವರ್ಷಗಳ ಕಾಲ ಪಟ್ಟಣದ ಜನರೊಂದಿಗೆ ಅವಿನಾಭಾವ ಸಂಬಂಧ ಬೆಳೆಸಿಕೊಂಡು, ಮನೆಮನೆಯ ಪ್ರೀತಿಗೆ ಪಾತ್ರವಾಗಿದ್ದ ಗೋವೊಂದು ಊರಿನಿಂದ ದೂರವಾದ ಬಳಿಕ ಮೃತಪಟ್ಟಿರುವ ಘಟನೆ ರಟ್ಟಿಹಳ್ಳಿ ಜನರಲ್ಲಿ ದುಃಖ ಮೂಡಿಸಿದೆ. ಊರಿನ ಜನರೊಂದಿಗೆ ಬೆರೆತು, ಎಲ್ಲರ ಮನೆಯ ಸದಸ್ಯನಂತಿದ್ದ ಗೋವಿನ ಅಗಲಿಕೆ ಜನರ ಮನಕಲಕಿದೆ.

ಪಟ್ಟಣದ ಹಾಲಪ್ಪ ಬೆನ್ನೂರು ಅವರು ಶ್ರೀ ಬೀರಲಿಂಗೇಶ್ವರ ದೇವಸ್ಥಾನಕ್ಕೆ ಗೋವನ್ನು ದಾನವಾಗಿ ನೀಡಿದ್ದರು. ಅಂದಿನಿಂದ ಗೋವು ದೇವಸ್ಥಾನದ ಆವರಣದಲ್ಲೇ ನೆಲೆಸಿತ್ತು. ಆದರೆ, ಅದು ದೇವಸ್ಥಾನದ ಆವರಣಕ್ಕೆ ಮಾತ್ರ ಸೀಮಿತವಾಗಿರಲಿಲ್ಲ. ಪ್ರತಿದಿನ ಬೆಳಿಗ್ಗೆ ಪಟ್ಟಣದ ಬೀದಿಗಳಿಗೆ ಬರುತ್ತಿದ್ದ ಗೋವು ಮನೆಮನೆಗೆ ತೆರಳಿ ಜನರು ನೀಡುತ್ತಿದ್ದ ಆಹಾರವನ್ನು ಸೇವಿಸುತ್ತಿತ್ತು. ಕೆಲವರು ಪ್ರೀತಿಯಿಂದ ಮೇವು ನೀಡಿದರೆ, ಇನ್ನು ಕೆಲವರು ಆಹಾರ ತಿನ್ನಿಸಿ ಸಂತೋಷಪಡುತ್ತಿದ್ದರು. ದಿನವಿಡೀ ಪಟ್ಟಣದಲ್ಲಿ ಸುತ್ತಾಡಿ ರಾತ್ರಿ ಮತ್ತೆ ದೇವಸ್ಥಾನಕ್ಕೆ ಮರಳುತ್ತಿತ್ತು.

ಹೀಗೆ ಸುಮಾರು 13 ವರ್ಷಗಳ ಕಾಲ ರಟ್ಟಿಹಳ್ಳಿ ಜನರ ಬದುಕಿನ ಅವಿಭಾಜ್ಯ ಭಾಗವಾಗಿತ್ತು. ಗೋವು ಬರುತ